ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ
ಕನ್ನಡದಿನ ಪತ್ರಿಕೆ
ರಾಯಚೂರಿನಿಂದ ರಾಜ್ಯದವರೆಗೆ

ಸಂಪಾದಕರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issuse : 124 | ದಿನಾಂಕ : 12-06-2026 ಶುಕ್ರವಾರ Date : 12-06-2026 Friday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಹಾರ್ಮುಜ್ ಬಳಿ ನಿಂತಿದ್ದ ಹಡಗಿನ ಮೇಲೆ ಅಮೆರಿಕ ದಾಳಿ: ಮೂವರು ಭಾರತೀಯ ನಾವಿಕರ ಸಾವು: ದೃಢಪಡಿಸಿದ ಕೇಂದ್ರ ಸಚಿವ

**ಮುಂಬೈ (ಮಹಾರಾಷ್ಟ್ರ),ಜೂ.11-**ಒಮಾನ್ ಕರಾವಳಿಯಲ್ಲಿ ವಾಣಿಜ್ಯ ಹಡಗಿನ ಮೇಲೆ ಅಮೆರಿಕ ಮಿಲಿಟರಿ ದಾಳಿಯ ನಂತರ ಕಾಣೆಯಾಗಿದ್ದ ಎಂಟಿ ಸೇಟ್‌ಬೆಲ್ಲೊ ಹಡಗಿನಲ್ಲಿದ್ದ ಮೂವರು ಭಾರತೀಯ ನಾವಿಕರು ಸಾವನ್ನಪ್ಪಿದ್ದಾರೆ ಎಂದು ದೃಢಪಡಿಸಲಾಗಿದೆ ಎಂದು ಕೇಂದ್ರ ಹಡಗು ಖಾತೆ ಸಚಿವ ಸರ್ಬಾನಂದ ಸೋನೋವಾಲ್ ಗುರುವಾರ ತಿಳಿಸಿದ್ದಾರೆ.

ಮೃತದೇಹಗಳನ್ನು ಪತ್ತೆಹಚ್ಚಿ ಗುರುತಿಸಿದ ಬಳಿಕ ಈ ಎಲ್ಲ ನಾವಿಕರ ಶವಗಳನ್ನು ಅಂತಿಮ ಸಂಸ್ಕಾರಕ್ಕಾಗಿ ಸ್ವದೇಶಕ್ಕೆ ಕಳುಹಿಸಲು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಇದೇ ವೇಳೆ ➘ 4

## ದ್ವಿತೀಯ ಪಿಯುಸಿನಲ್ಲಿ ರಾಜ್ಯಕ್ಕೆ 4ನೇ ರ್‍ಯಾಂಕ್ ಗಳಿಸಿದ್ದ ಅಭಿಜ್ಞಾ ಭಟ್ ಅನಾರೋಗ್ಯದಿಂದ ಸಾವು

**ಸುಳ್ಯ (ದಕ್ಷಿಣ ಕನ್ನಡ),ಜೂ.11-**ಇತ್ತೀಚೆಗೆ ಪ್ರಕಟಗೊಂಡ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 596 ಅಂಕಗಳನ್ನು ಗಳಿಸಿ ರಾಜ್ಯ ಮಟ್ಟದಲ್ಲಿ 4ನೇ



ರ್‍ಯಾಂಕ್ ಗಳಿಸಿ ಗಮನ ಸೆಳೆದಿದ್ದ ಪ್ರತಿಭಾವಂತ ವಿದ್ಯಾರ್ಥಿನಿ ಅಭಿಜ್ಞಾ ಭಟ್ (19) ಅನಾರೋಗ್ಯದಿಂದ ಬುಧವಾರ ಮೃತಪಟ್ಟಿದ್ದಾರೆ. ಯುವತಿಯ ಅಕಾಲಿಕ ಅಗಲಿಕೆಗೆ ಕುಟುಂಬಸ್ಥರು, ಸ್ನೇಹಿತರು, ಶಿಕ್ಷಕರಲ್ಲಿ ತೀವ್ರ ದುಃಖವನ್ನುಂಟು ಮಾಡಿದೆ. ಅಭಿಜ್ಞಾ ಭಟ್ ಅವರು ಸುಳ್ಯದ ಹೆಸರಾಂತ ಕಿವಿ, ಮೂಗು ಮತ್ತು ಗಂಟಲು(ಇಎನ್ಟಿ) ತಜ್ಞ ವೈದ್ಯರಾದ ಡಾ. ➘ 4

## ಬೆಳಗಾವಿ: 2 ಕೋಟಿ ಇನ್ಶೂರೆನ್ಸ್ ಹಣಕ್ಕಾಗಿ ಗಂಡನನ್ನೇ ಕೊಲೆಗೈದ ಪತ್ನಿ

**ಬೆಳಗಾವಿ,ಜೂ.11-**ಮಹಿಳೆಯೊಬ್ಬಳು ವಿಮಾ ಹಣವನ್ನು ಪಡೆಯುವ ಸಲುವಾಗಿ ತನ್ನ ಪ್ರಿಯಕರ ಸಹಾಯದಿಂದ ತಾಳಿ ಕಟ್ಟಿದ ಪತಿಯನ್ನೇ ಕೊಂದು ನಂತರ ಅಪಘಾತದ ಕಥೆ ಕಟ್ಟಿರುವ ಘಟನೆ ಯಮಕನಮರಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಯಮಕನಮರಡಿ ಗ್ರಾಮದ ಮಾಜಿ ಸೈನಿಕ ಸಂದೀಪ್ ಮಾಂಜರೆ ಎಂಬುವರು ಜಾತ್ರೆಗೆ ಹೋಗಿದ್ದ ಸಂದರ್ಭದಲ್ಲಿ ಸಣ್ಣ ಅಪಘಾತವಾಗಿ ಘಟಪ್ರಭಾದಲ್ಲಿರುವ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು.

ಆದರೆ ಕ್ರಮೇಣವಾಗಿ ಮಾಜಿ ಸೈನಿಕ ಸಂದೀಪ ಗುಣಮುಖರಾಗುತ್ತಿದ್ದಂತೆ

ಪತ್ನಿ ಹಾಗೂ ಆಕೆಯ ಪ್ರಿಯಕರ ಸೇರಿ ಆಸ್ಪತ್ರೆಯಲ್ಲಿ ಸಂದೀಪಗೆ ಹಾಕಲಾಗಿದ್ದ ಸಲಾಯಿನ್‌ನಲ್ಲಿ ಕ್ರಿಮಿನಾಶಕ ಔಷಧಿ ಸೇರಿಸಿ ಮಾಜಿ ಸೈನಿಕನನ್ನು ಕೊಲೆ ಮಾಡಿ ಅಪಘಾತದಿಂದ ಸಾವನ್ನಪ್ಪಿದ್ದಾರೆ ಎಂದು ಬಿಂಬಿಸಿದ್ದಳು. ➘ 4

### ಪ್ರಧಾನಿ ಮೋದಿ ಅಧ್ಯಕ್ಷತೆಯಲ್ಲಿ 11ನೇ ನೀತಿ ಆಯೋಗದ ಸಭೆ

# ಡಿ.ಕೆ.ಶಿವಕುಮಾರ್ ಸೇರಿ ಹಲವು ರಾಜ್ಯಗಳ ಮುಖ್ಯಮಂತ್ರಿಗಳು ಭಾಗಿ




**ನವದೆಹಲಿ,ಜೂ.11-**ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆ ಯಲ್ಲಿ ರಾಷ್ಟ್ರ ರಾಜಧಾನಿ ಯಲ್ಲಿನ ರಾಷ್ಟ್ರಪತಿ ಭವನ ಸಾಂಸ್ಕೃತಿಕ ಕೇಂದ್ರದಲ್ಲಿಂದು 11ನೇ ನೀತಿ ಆಯೋಗ ಆಡಳಿತ ಮಂಡಳಿ ಸಭೆ ಆರಂಭವಾಗಿದೆ.

ಸಭೆಯಲ್ಲಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಮಂತ್ರಿಗಳು, ಕೇಂದ್ರಾಡಳಿತ ಪ್ರದೇಶಗಳ ಲೆಫ್ಟಿನೆಂಟ್ ಗವರ್ನರ್‌ಗಳು ಮತ್ತು ಆಡಳಿತಾಧಿಕಾರಿಗಳು, ನೀತಿ ಆಯೋಗದ ಉಪಾಧ್ಯಕ್ಷರು, ಸದಸ್ಯರು ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕೂಡ ಉಪಸ್ಥಿತರಿದ್ದಾರೆ.

ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್, ಅಸ್ಸಾಂನ ಹಿಮಂತ ಬಿಸ್ವಾ ಶರ್ಮಾ, ಬಿಹಾರದ ಸಾಮ್ರಾಟ್ ಚೌಧರಿ, ದೆಹಲಿ ಸಿಎಂ ರೇಖಾ ಗುಪ್ತಾ ಮತ್ತು ಹರಿಯಾಣ ಸಿಎಂ ನಯಾಬ್ ಸಿಂಗ್ ಸೈನಿ ಸೇರಿದಂತೆ ಹಲವು ಮುಖ್ಯಮಂತ್ರಿಗಳು ಸಭೆಯಲ್ಲಿ ಭಾಗಿಯಾಗಿದ್ದಾರೆ. ➘ 4

# ಸಿಂಧನೂರಿಗೆ ಜಿಲ್ಲಾಧಿಕಾರಿ ಧಿಢೀರ್ ಭೇಟಿ: ಬೆಚ್ಚಿ ಬಿದ್ದ ಅಧಿಕಾರಿಗಳು, ಲೋಪ ಕಂಡುಬಂದರೆ ಕ್ರಮ-ಪೂವಿತಾ





■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.11-**ಸಿಂಧನೂರು ಸ್ಥಳೀಯ ತಾಲ್ಲೂಕು ಕಛೇರಿಗಳಿಗೆ ಬುಧವಾರ ದಿಢೀರ್ ಭೇಟಿ ನೀಡಿದ ಜಿಲ್ಲಾಧಿಕಾರಿ ಪೂವಿತಾ ಎಸ್ ಅವರು 'ಸಾರ್ವಜನಿಕರಿಗೆ ಸಮಯೋಚಿತ, ಪಾರದರ್ಶಕ ಹಾಗೂ ಗುಣಮಟ್ಟದ ಸೇವೆ ಒದಗಿಸಬೇಕೆಂದು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ತಾಲ್ಲೂಕು ಮಟ್ಟದ ಅಧಿಕಾರಿಗಳು ಶಿಸ್ತು ಮತ್ತು ಸಮಯ ಪಾಲನೆ ಅನುಸರಿಸಬೇಕು. ನಿರ್ಲಕ್ಷ್ಯವಹಿಸಿದರೆ ಶಿಸ್ತು ಕ್ರಮ ➘ 4

### ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ: ಕಾಂಗ್ರೆಸ್‌ನಿಂದ ತರಬೇತಿ

# ಪಶ್ಚಿಮ ಬಂಗಾಳದಲ್ಲಿ ಅರ್ಹರನ್ನು ಮತದಾರ ಪಟ್ಟಿಯಿಂದ ತೆಗೆದು ಹಾಕಿದ ಅನಾಹುತ

### ಎಚ್ಚರಿಕೆಯಿಂದ ನಿಗಾವಹಿಸಿ-ಕುಮಾರನಾಯಕ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.11-**ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಿರುವ ಕಾರಣ ಪಶ್ಚಿಮ ಬಂಗಾಳ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿದ್ದು, ಇದೊಂದು ಘನಘೋರ ಅನಾಹುತವಾಗಿದ್ದು, ಇದರಿಂದ ಮತದಾರರಲ್ಲಿ ದೊಡ್ಡ ಭಯ ಹುಟ್ಟಿದ್ದು, ಇದೀಗ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ನಡೆಸಲಾಗುತ್ತಿದ್ದು, ಕಾಂಗ್ರೆಸ್ ಪಕ್ಷದ ಬಿಎಲ್‌ಎಗಳು ಅತ್ಯಂತ ಎಚ್ಚರಿಕೆಯಿಂದ ಈ ಕಾರ್ಯವನ್ನು ಮಾಡಬೇಕು ಎಂದು ಸಂಸದ ಜಿ.ಕುಮಾರ ನಾಯಕ ಹೇಳಿದರು.

ಅವರಿಂದು ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಕಾಂಗ್ರೆಸ್ ಪಕ್ಷದಿಂದ ಹಮ್ಮಿಕೊಂಡಿದ್ದ ಎಸ್‌ಐಆರ್ ಕುರಿತು ತರಬೇತಿ ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಎಸ್‌ಐಆರ್ ಕುರಿತು ಪಕ್ಷದಿಂದ ತರಬೇತಿ ಕಾರ್ಯಕ್ರಮ ನಡೆಸುತ್ತಿರುವುದು ಅತ್ಯಂತ ಶ್ಲಾಘನೀಯ ವಿಷಯವಾಗಿದ್ದು, ಇದೊಂದು ವಿಶೇಷ ದಿನವಾಗಿದೆ. ಇಡೀ ದೇಶದಲ್ಲಿ ಎಸ್‌ಐಆರ್ ಕುರಿತು ಜಾಗೃತಿ ಮೂಡಿಸಲಾಗುತ್ತಿದ್ದು, ಬೂತ್ ಮಟ್ಟದಿಂದ ಇದರ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಎಸ್‌ಐಆರ್ ನಿಂದ ಸಾಕಷ್ಟು ಅನಾಹುತಗಳಾಗಿದ್ದು, 30 ಲಕ್ಷ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಲಾಗಿತ್ತು. ಇದೊಂದು ಕಳವಳಕಾರಿ ವಿಷಯವಾಗಿದೆ. ತರಬೇತಿಯನ್ನು ಸರಿಯಾಗಿ ಪಡೆದುಕೊಂಡು ಬೂತ್‌ಗಳ ಏಜೆಂಟರ್‌ಗಳು ಸರಿಯಾಗಿ ಕಾರ್ಯ ನಿರ್ವಹಣೆ ಮಾಡಬೇಕು ಎಂದರು.

ನಂತರ ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಮಾತನಾಡಿ, ಕೇಂದ್ರ ಬಿಜೆಪಿ ಸರ್ಕಾರ ಚುನಾವಣಾ ಆಯೋಗವನ್ನು ತನ್ನ ಕಪಿಮುಷ್ಠಿಯಲ್ಲಿ ಹಿಡಿದುಕೊಂಡು, ಅರ್ಹ ಮತದಾರರನ್ನೂ ಕೂಡ ಮತದಾರರ ಪಟ್ಟಿಯಿಂದ ತೆಗೆದು ಹಾಕುವ ಮೂಲಕ ಮತದಾರರಿಗೆ ವಂಚನೆ ಮಾಡಿದೆ. ಈ ಬಗ್ಗೆ ಪ್ರತಿಯೊಬ್ಬ ಕಾಂಗ್ರೆಸ್ ಕಾರ್ಯಕರ್ತರು ಜಾಗೃತರಾಗಬೇಕು. ಸೈನಿಕ, ಸಿಪಾಯಿಯಂತೆ ಕಾಂಗ್ರೆಸ್ ಪಕ್ಷದ ಬ್ಲಾಕ್ ಏಜೆಂಟ್‌ಗಳು ಆಯಾ ಬ್ಲಾಕ್‌ನ ಅಧಿಕಾರಿಗಳೊಂದಿಗೆ ಸಮನ್ವಯತೆಯಿಂದ ಜಂಟಿಯಾಗಿ ಎಸ್‌ಐಆರ್ ಕಾರ್ಯವನ್ನು ಪೂರ್ಣಗೊಳಿಸಬೇಕು ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ ಮತನಾಡಿ, ದೇಶದಲ್ಲಿ 63 ಲಕ್ಷ ಮತದಾರರನ್ನು ಹೊರಗಿಡುವ ಹುನ್ನಾರ ನಡೆದಿದೆ ಎಂದು ಕಾಂಗ್ರೆಸ್ ವರಿಷ್ಠರಾದ ರಾಹುಲ್‌ಗಾಂಧಿ ಅವರು ಆರೋಪಿಸಿದ್ದರು. ಆದರೆ ಅದನ್ನು ಅಧಿಕಾರಿಗಳು ಮತ್ತು ಚುನಾವಣಾ ಆಯೋಗ ಗಂಭೀರವಾಗಿ ಪರಿಗಣಿಸದ ಕಾರಣ ಪಶ್ಚಿಮ ಬಂಗಳಾದಲ್ಲಿ 98 ➘ 4

# ಅದಿತಿ ಆಸ್ಪತ್ರೆಯಲ್ಲಿ ತಜ್ಞ ವೈದ್ಯರಿಲ್ಲದೇ ಟೆಕ್ನಿಷಿಯನ್ ನಿಂದ ವರದಿ : ಕ್ರಮಕ್ಕೆ ಅಬ್ದುಲ್ ಶಾಲಂ ಆಗ್ರಹ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.11-**ನಗರದ ಡಾ.ದೀಪಾ ಹನುಮಸಾಗರ ಇವರು ಅದಿತಿ ಆಸ್ಪತ್ರೆಯಲ್ಲಿ ತಜ್ಞ ವೈದ್ಯರಿಲ್ಲದೇ ಅನೇಕ ಪರೀಕ್ಷೆಗಳನ್ನು ತಂತ್ರಜ್ಞರಿಂದಲೇ ನೀಡಿ ಜನರಿಗೆ ತಪ್ಪು ಮಾಹಿತಿ ನೀಡಲಾಗುತ್ತಿದೆ.ಜಿಲ್ಲಾ ಆರೋಗ್ಯ ಅಧಿಕಾರಿಗಳು ಕೂಡಲೇ ಕ್ರಮಕ್ಕೆ ಮುಂದಾಗಬೇಕೆಂದು ಅಬ್ದುಲ್ ಶಾಲಂ ಆಗ್ರಹಿಸಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ ಪತ್ನಿ ರಿಯಾಜ್ ಬೇಗಂ ಇವರಿಗೆ ಅನಾರೋಗ್ಯದ ನಿಮಿತ್ಯ ಅದಿತಿ ಆಸ್ಪತ್ರೆಗೆ 2025 ಡಿಸೆಂಬರ್ 22 ರಂದು ಹೋಗಿದ್ದೆ. ರಕ್ತ ಪರೀಕ್ಷೆ ಸೇರಿ ಅನೇಕ ಪರೀಕ್ಷೆಗಳನ್ನು ಮಾಡಿಸಲಾಯಿತು. ಆದರೆ ಆಸ್ಪತ್ರೆಯಲ್ಲಿಪ್ಯಾಥೋಲಿಸ್ಟ್ ➘ 4

# ನೀರಭಾವಿ ಕುಂಟಾ, ಯಲ್ಲಮ್ಮ ಕೆರೆ ಅಭಿವೃದ್ಧಿ ಕಾಮಗಾರಿ ವೀಕ್ಷಿಸಿ ಬೋಸರಾಜ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.11-**ಕೆರೆ-ಕಟ್ಟೆಗಳ ಸಂರಕ್ಷಣೆ ಹಾಗೂ ಅಂತರ್ಜಲ ವೃದ್ಧಿಗೆ ವೈಜ್ಞಾನಿಕ ಯೋಜನೆಗಳ ಮೂಲಕ ನೀರಭಾವಿ ಕುಂಟೆ ಮತ್ತು ಯಲ್ಲಮ್ಮ ಕೆರೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಅಧಿಕಾರಿಗಳು ಗುಣಮಟ್ಟ ಹಾಗೂ ತ್ವರಿತಗತಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಸಚಿವ ಎನ್.ಎಸ್. ಬೋಸರಾಜು ಸೂಚಿಸಿದರು.



ನಗರದ ನೀರಭಾವಿ ಕುಂಟೆ ಮತ್ತು ಯಲ್ಲಮ್ಮ ಕೆರೆ ಅಭಿವೃದ್ಧಿ ಕಾಮಗಾರಿ ಹಾಗೂ ತ್ಯಾಜ್ಯ ನೀರು ವಿಲೇವಾರಿ ಚರಂಡಿ ಕಾಮಗಾರಿ ಸ್ಥಳಕ್ಕೆ ಸಂಸದ ಜಿ. ಕುಮಾರ ನಾಯಕ, ಮಾಜಿ ಶಾಸಕ ಎ. ಪಾಪರೆಡ್ಡಿ ಹಾಗೂ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಕಾಮಗಾರಿಗಳ ಪ್ರಗತಿ ಪರಿಶೀಲಿಸಿದ ಅವರು, ಸಾರ್ವಜನಿಕರು ಕೆರೆಗಳಿಗೆ ಯಾವುದೇ ರೀತಿಯ ತ್ಯಾಜ್ಯ ಹಾಕದೆ ಸ್ವಚ್ಛತೆ ಕಾಪಾಡಲು ಸಹಕರಿಸಬೇಕು ಎಂದು ಮನವಿ ಮಾಡಿದರು.

ಪುರಾತನ ಕಾಲದಿಂದಲೂ ಜನರು ಕೆರೆ-ಕಟ್ಟೆಗಳ ನೀರಿನ ಮೇಲೆ ಅವಲಂಬಿತರಾಗಿದ್ದು, ಅನೇಕ ಜಲಚರಗಳು ಹಾಗೂ ಪಕ್ಷಿಗಳಿಗೂ ಅವು ಆಶ್ರಯ ತಾಣಗಳಾಗಿವೆ. ಅಂತರ್ಜಲ ಮಟ್ಟ ಹೆಚ್ಚಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಕೆರೆಗಳ ಪುನಶ್ಚೇತನಕ್ಕೆ ಆದ್ಯತೆ ನೀಡಿದ್ದು, ಕಾಮಗಾರಿಗಳನ್ನು ವೈಜ್ಞಾನಿಕ ರೀತಿಯಲ್ಲಿ ರೂಪಿಸಲಾಗಿದೆ ಎಂದು ಹೇಳಿದರು.

ಕೆರೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಗುಣಮಟ್ಟದಿಂದ ನಿರ್ವಹಿಸುವುದರ ಜೊತೆಗೆ, ಕೆರೆ ಪ್ರದೇಶದಲ್ಲಿ ಒತ್ತುವರಿ ಆಗದಂತೆ ಗಡಿಭಾಗದಲ್ಲಿ ಫೆನ್ಸಿಂಗ್ ಅಳವಡಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ಎ. ಪಾಪರೆಡ್ಡಿ, ಕಾಂಗ್ರೆಸ್ ಮುಖಂಡರಾದ ಕೆ. ಶಾಂತಪ್ಪ, ಜಯವಂತರಾವ್ ಪತಂಗೆ, ಲಕ್ಷ್ಮೀರೆಡ್ಡಿ, ಶೇಖರ್ ರೆಡ್ಡಿ, ಜಿ. ಶಿವಮೂರ್ತಿ, ಅಮರೇಗೌಡ ಹಂಚಿನಾಳ, ಬಸವರಾಜ ಪಾಟೀಲ, ನರಸಿಂಹಲು ಮಾಡಗಿರಿ, ಗೋವಿಂದರೆಡ್ಡಿ, ಮುನಿಸ್ವಾಮಿ, ಸುಭಾಷ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 42 ದಿನಗಳ ಸಾವು-ಬದುಕಿನ ಹೋರಾಟದಲ್ಲಿ ಗೆದ್ದ 13 ವರ್ಷದ ಬಾಲಕ

## ನ್ಯೂ ಅಮೃತ ಆಸ್ಪತ್ರೆಯ ವೈದ್ಯರ ಪರಿಶ್ರಮ ಸಾರ್ಥಕ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.11-** ತೀವ್ರ ಅನಾರೋಗ್ಯಕ್ಕೆ ತುತ್ತಾಗಿದ್ದ 13 ವರ್ಷದ ಬಾಲಕ 42 ದಿನಗಳ ಸಾವು-ಬದುಕಿನ ನಡುವೆ ಹೋರಾಟ ನಡೆಸಿ ಇಂದು ಗೆದ್ದು ಬಂದಿದ್ದು, ಅದಕ್ಕೆ ಸ್ಥಳೀಯ ಅಮೃತ ಆಸ್ಪತ್ರೆಯ ಡಾ.ಮಲ್ಲೇಶಗೌಡ ನೇತೃತ್ವದಲ್ಲಿ ತಜ್ಞ ವೈದರು ಮತ್ತು ಸಿಬ್ಬಂದಿ ವರ್ಗವು ಒಂದು ತಂಡವಾಗಿ ನಡೆಸಿದ ನಿರಂತರ ವೈದ್ಯಕೀಯ ಸೇವೆಯ ಪರಿಶ್ರಮ, ಆ ಬಾಲಕನ ಕುಟುಂಬಸ್ಥರು ಆಸ್ಪತ್ರೆ ಹಾಗೂ ವೈದ್ಯರ ಮೇಲೆ ಇಟ್ಟಿದ್ದಂತಹ ಅಪಾರ ನಂಬಿಕೆ ಮತ್ತು ಬಾಲಕನ ಧೈರ್ಯದಿಂದ ಕೂಡಿದ ದಿಟ್ಟತನಕ್ಕೆ ಸಾಕ್ಷಿಯಾಗಿದೆ.



ಜಿಲ್ಲೆಯ ಸಿಂಧನೂರು ತಾಲೂಕಿನ 13 ವರ್ಷದ ಬಾಲಕ ಪ್ರಜ್ವಲ್ ಅತ್ಯಂತ ಗಂಭೀರ ಮತ್ತು ಸಂಕೀರ್ಣವಾದ ನ್ಯೂರೋಲಾಜಿಕಲ್ ಸ್ಥಿತಿಯನ್ನು ಅನುಭವಿಸುತ್ತಿದ್ದರು. ಮೆದುಳು ಜ್ವರ, ಕೋಮಾ, ನರ ದೌರ್ಬಲ್ಯ,ಪೂರ್ತಿ ಪಾರ್ಶ್ವಾಯು ಕಾಯಿಲೆಗಳಿಂದ ಬಳಲುತ್ತಿದ್ದನು.

ಬಾಲಕ ಪ್ರಜ್ವಲ್ ಕಾಯಿಲೆ ಗುಣಪಡಿಸುವುದಕ್ಕಾಗಿ ಸಿಂಧನೂರಿನ ಸಹನಾ ಆಸ್ಪತ್ರೆ ವೈದ್ಯ ಡಾ.ಕೆ.ಶಿವರಾಜ ಅವರು ಕಳೆದ ಏ.26 ರಂದು ಹೆಚ್ಚಿನ ಹಾಗೂ ಪರಿಣಾಮಕಾರಿ ಚಿಕಿತ್ಸೆಗಾಗಿ ರಾಯಚೂರಿನ ನ್ಯೂ ಅಮೃತ ಆಸ್ಪತ್ರೆಗೆ ಶಿಫಾರಸ್ಸು ಮಾಡಿದ್ದರು. ಅತ್ಯಂತ ಗಂಭೀರ ಮತ್ತು ಸಂಕೀರ್ಣವಾದ ನ್ಯೂರೋಲಾಜಿಕಲ್ ಸ್ಥಿತಿಯೊಂದಿಗೆ ಅಂದು ಆಸ್ಪತ್ರೆಗೆ ದಾಖಲಾಗಿದ್ದ ಬಾಲಕ ಪ್ರಜ್ವಲ್‌ಗೆ ಚಿಕಿತ್ಸಾ ಪಯಣ ಬಹಳ ಸವಾಲಿನಿಂದ ಕೂಡಿತ್ತು.

ನಿರಂತರ 4 ದಿನಗಳ ಕಾಲ ವೆಂಟಿಲೇಟರ್ ಸಹಾಯ ಅಗತ್ಯವಾಯಿತು, 15 ದಿನಗಳ ಕಾಲ ಕೋಮಾ ಸ್ಥಿತಿಯಲ್ಲಿ ಇದ್ದರು ಮತ್ತು ಒಂದು ತಿಂಗಳಿಗಿಂತ ಹೆಚ್ಚು ಕಾಲ ನಳಿಕೆ ಮೂಲಕ ಊಟದ ಫೀಡ್ಸ್ ಮೇಲೆ ಇದ್ದರು. ಚೇತರಿಕೆ ಆರಂಭವಾಗುತ್ತಿದ್ದಂತೆ ಮತ್ತೊಂದು ದೊಡ್ಡ ಸವಾಲಾಗಿ ಐಜಜಿಣ ಆಣಡಿಚಿಟ ➘ 4

# ಅಂತರಾಷ್ಟ್ರೀಯ ಯೋಗ ದಿನಾಚರಣೆ: ಜೂ.14 ರಿಂದ 21 ವರೆಗೆ ಉಚಿತ ಪತಂಜಲಿ ಯೋಗ ಶಿಬಿರ-ವಿಠೋಬರಾವ್



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.12-**ಪತಂಜಲಿ ಯೋಗ ಸಮಿತಿ ಹಾಗೂ ಲಕ್ಷ್ಮೀ ವೆಂಕಟೇಶ್ವರ ದೇಸಾಯಿ ಮಹಾವಿದ್ಯಾಲಯಗಳ ಸಹಯೋಗದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜೂ.14 ರಿಂದ 21 ವರೆಗೆ ಉಚಿತ ಯೋಗ ಪ್ರಾಣಾಯಾಮ ಶಿಬಿರ ಆಯೋಜಿಸಲಾಗಿದೆ ಎಂದು ಪತಂಜಲಿ ಯೋಗ ಸಮಿತಿಯ ಪ್ರಭಾರಿ ವಿಠೋಬರಾವ್ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ಎಲ್‌ವಿಡಿ ಕಾಲೇಜು ಮೈದಾನದಲ್ಲಿ ಪ್ರತಿದಿನ ಬೆಳಿಗ್ಗೆ 5.30 ರಿಂದ 7.30ವರೆಗೆ ಯೋಗ ಶಿಬಿರ ನಡೆಯಲಿದೆ. ಬದಲಾದ ಜೀವನ ಶೈಲಿಯಿಂದ ಜನರು ಅನೇಕ ರೋಗಗಳಿಂದ ಬಳಲುತ್ತಿದ್ದಾರೆ. ನಿಯಮಿತ ಯೋಗದಿಂದ ರೋಗ ಮುಕ್ತವಾಗುವ ಅವಕಾಶವಿದೆ. ಮಧುಮೇಹ, ರಕ್ತದೊತ್ತಡ, ಥೈರಾಯರ್, ಧಮ್ಮು, ಬೆನ್ನನೋವು ಸೇರಿದಂತೆ ಅನೇಕ ರೋಗಗಳು ಯೋಗದಿಂದ ಗುಣಮುಖವಾಗುತ್ತವೆ. ಮಕ್ಕಳಲ್ಲಿ ಜ್ಞಾಪಕ ಶಕ್ತಿ ಹೆಚ್ಚಿಸಿ ಏಕಾಗ್ರತೆ ಮೂಡಿಸಲು ಸಹ ಯೋಗ ಸಹಕಾರಿಯಾಗಿದೆ. ಕಾರಣ ಹೆಚ್ಚು ಹೆಚ್ಚು ಜನರುನೊಂದಣಿ ಪಡೆದು ಶಿಬಿರದಲ್ಲಿ ಭಾಗವಹಿಸಬಹುದಾಗಿದೆ. ಉಚಿತವಾಗಿ ನಡೆಯುವ ಶಿಬಿರ ಸದುಪಯೋಗ ಪಡೆಯಬೇಕೆಂದರು.

ಈ ಸಂದರ್ಬದಲ್ಲಿ ಉತ್ತರ ಕರ್ನಾಟಕ ಪ್ರಭಾರಿ ಶ್ರೀದೇವಿ ಅಶೋಕ ಪಾಟೀಲ್, ಅಶೋಕ ಪಾಟೀಲ್, ನಾಗಾರ್ಜುನ, ರವಿ ದೋತ್ತರಬಂಡಿ, ಕಿಶೋಕಕುಮಾರ, ಗುಲ್ದಾಸ್ ನಾಗರಾಜ, ಬಿ.ಟಿ.ಅಮರೇಶ ಉಪಸ್ಥಿತರಿದ್ದರು.

# ರಾಜ್ಯಸಭೆ ಚುನಾವಣೆ: ಕರ್ನಾಟಕದಿಂದ ಮಲ್ಲಿಕಾರ್ಜುನ ಖರ್ಗೆ ಸೇರಿ ನಾಲ್ವರು ಅವಿರೋಧ ಆಯ್ಕೆ

■ ಕನ್ನಡ ಮಾತೃ ಭೂಮಿ ವಾರ್ತೆ





**ಬೆಂಗಳೂರು,ಜೂ.11**-ರಾಜ್ಯಸಭಾ ಚುನಾವಣೆಯಲ್ಲಿ ರಾಜ್ಯದಿಂದ ನಾಲ್ವರು ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿಗಳಾದ ಮಲ್ಲಿಕಾರ್ಜುನ ಖರ್ಗೆ, ಪವನ್ ಖೇರಾ, ಮನ್ಸೂರ್ ಅಲಿಖಾನ್ ಹಾಗೂ ಬಿಜೆಪಿ ಅಭ್ಯರ್ಥಿಯಾದ ಎಂ.ನಾಗರಾಜ್ ಅವಿರೋಧ ವಾಗಿ ಚುನಾಯಿ ತರಾಗಿದ್ದಾರೆ.

ಚುನಾವಣಾಧಿಕಾರಿ ಕೆ.ಎಂ. ವಿಶಾಲಾಕ್ಷಿ ಅವಿರೋಧ ಆಯ್ಕೆಯಾಗಿರುವ ಅಭ್ಯರ್ಥಿಗಳಾದ ಪವಬ್ ಖೇರಾ, ಮನ್ಸೂರ್ ಅಲಿ ಖಾನ್ ಹಾಗೂ ಎಂ.ನಾಗರಾಜ್ ಅವರಿಗೆ ಪ್ರಮಾಣಪತ್ರ ನೀಡಿದರು.

ರಾಜ್ಯಸಭೆ ಚುನಾವಣೆಗೆ ಒಟ್ಟು ಐವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಕೆ ಮಾಡಿದ್ದರು. ಈ ಪೈಕಿ ರಾಜ್ಯಸಭೆಗೆ ಪಕ್ಷೇತರ ಅಭ್ಯರ್ಥಿಯಾಗಿ ಬೋಜಣ್ಣ ಸೋಮಣ್ಣ ನಾಮಪತ್ರ ಸಲ್ಲಿಸಿದ್ದರು. ಪಕ್ಷೇತರ ಅಭ್ಯರ್ಥಿಗೆ ಯಾವುದೇ ಅನುಮೋದಕರ ಸಹಿ ಇಲ್ಲದ ಕಾರಣ ನಾಮಪತ್ರ ತಿರಸ್ಕೃತಗೊಂಡಿತ್ತು. ಹಾಗಾಗಿ ಕಣದಲ್ಲಿ ನಾಲ್ಕು ಅಭ್ಯರ್ಥಿಗಳು ಉಳಿದು ಕೊಂಡಿದ್ದರು.

ಇಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿತ್ತು. ಯಾರೂ ನಾಮಪತ್ರ ಹಿಂಪಡೆದಿಲ್ಲ. ಆ ಮೂಲಕ ನಾಲ್ಕು ಮಂದಿ ಅಭ್ಯರ್ಥಿಗಳು ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಕೆ.ಎಂ. ವಿಶಾಲಾಕ್ಷಿ ತಿಳಿಸಿದರು.

ನಿರೀಕ್ಷೆಗಳಿಗೆ ತಕ್ಕಂತೆ ಕೆಲಸ ಮಾಡುವೆ: ರಾಜ್ಯಸಭೆಗೆ ಆಯ್ಕೆಯಾದ ಎಂ.ನಾಗರಾಜ್ ಮಾತನಾಡುತ್ತಾ, ಕೇಂದ್ರದ ವರಿಷ್ಠರು, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಬಿಜೆಪಿಯ ಸದಸ್ಯರಿಗೆ ಧನ್ಯವಾದಗಳು. ಈ ಹಿಂದೆ ಕೋರ್ ಕಮಿಟಿ ಸದಸ್ಯರಿಗೆ ಮನವಿ ಮಾಡಿದ್ದೆ. ನಾನೊಬ್ಬ ಸಾಮಾನ್ಯ ಕಾರ್ಯಕರ್ತ. ಈ ಅವಕಾಶವನ್ನು ಬಳಸಿಕೊಂಡು ಅಪೇಕ್ಷೆ, ನಿರೀಕ್ಷೆಗಳಿಗೆ ತಕ್ಕಂತೆ ಕೆಲಸ ಮಾಡುತ್ತೇನೆ ಎಂದರು.

ಕನ್ನಡ ಭಾಷೆ ಕಲಿತು ಮಾತನಾಡುತ್ತೇನೆ: ರಾಜ್ಯಸಭೆಗೆ ಆಯ್ಕೆಯಾದ ಪವನ್ ಖೇರಾ ಮಾತನಾಡಿ, ಕರ್ನಾಟಕದಿಂದ ರಾಜ್ಯಸಭೆಗೆ ಆಯ್ಕೆ ಆಗಿದ್ದಕ್ಕೆ ಧನ್ಯವಾದಗಳು. ಪಕ್ಷ ಹಾಗೂ ವರಿಷ್ಠರಿಗೆ ತುಂಬಾ ಆಬಾರಿಯಾಗಿದ್ದೇನೆ. ಕರ್ನಾಟಕದ ಜನತೆಗೆ ಧನ್ಯವಾದಗಳು. ಕನ್ನಡ ಭಾಷೆ ಅದ್ಬುತ ಭಾಷೆಯಾಗಿದೆ. ಮುಂದಿನ ದಿನಗಳಲ್ಲಿ ಕನ್ನಡ ಭಾಷೆ ಕಲಿತು ಮಾತನಾಡುತ್ತೇನೆ ಎಂದು ತಿಳಿಸಿದರು.

ಸಿಎಂ ಡಿಕೆಶಿ ಅಭಿನಂದನೆ: ಕರ್ನಾಟಕದಿಂದ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪವನ್ ಖೇರಾ ಹಾಗೂ ಮನ್ಸೂರ್ ಅಲಿ ಖಾನ್ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು. ನಮ್ಮ ರಾಜ್ಯದ ಹಿತರಕ್ಷಣೆ, ಪ್ರಗತಿ ಮತ್ತು ಅಭಿವೃದ್ಧಿಗಾಗಿ ಇವರೆಲ್ಲರೂ ಕೇಂದ್ರದಲ್ಲಿ ಕರ್ನಾಟಕದ ಬಲವಾದ ಧ್ವನಿಯಾಗಲಿದ್ದಾರೆ ಎಂಬ ವಿಶ್ವಾಸ ನನಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.

## ನಾಮಪತ್ರ ತಿರಸ್ಕೃತಗೊಂಡ ಬೆನ್ನಲ್ಲೇ ಸುಪ್ರೀಂ ಕದತಟ್ಟಿದ ಮೀನಾಕ್ಷಿ ನಟರಾಜನ್: ಇಂದು ಅರ್ಜಿ ವಿಚಾರಣೆ ನಡೆಸಲಿರುವ ಕೋರ್ಟ್

**ನವದೆಹಲಿ,ಜೂ.11**-ಮಧ್ಯಪ್ರದೇಶದಿಂದ ರಾಜ್ಯಸಭಾ ಚುನಾವಣೆಗೆ ಸಲ್ಲಿಸಿದ್ದ ನಾಮಪತ್ರ ತಿರಸ್ಕೃತಗೊಂಡಿರುವ ಬೆನ್ನಲ್ಲೇ ಕಾಂಗ್ರೆಸ್ ನಾಯಕಿ ಮೀನಾಕ್ಷಿ ನಟರಾಜನ್ ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದಾರೆ. ಅವರು ಸಲ್ಲಿಕೆ ಮಾಡಿರುವ ಅರ್ಜಿಯ ವಿಚಾರಣೆಯನ್ನು ಶುಕ್ರವಾರ ಆಲಿಸುವುದಾಗಿ ಪೀಠ ತಿಳಿಸಿದೆ.

ಅರ್ಜಿ ಹೇಗೆ ಸಮರ್ಥಿಸಿಕೊಳ್ಳಬಹುದೆಂದು ಸುಪ್ರೀಂ ಪ್ರಶ್ನೆ: ನ್ಯಾಯಮೂರ್ತಿಗಳಾದ ಪ್ರಶಾಂತ್ ಕುಮಾರ್ ಮಿಶ್ರಾ ಮತ್ತು ಅತುಲ್ ಎಸ್ ಚಂದೂರ್ಕರ್ ಅವರನ್ನೊಳಗೊಂಡ ಭಾಗಶಃ ಕೆಲಸದ ದಿನದ (ಪಿಡಬ್ಲ್ಯೂಡಿ) ಪೀಠವು, ಚುನಾವಣಾ ಪ್ರಕ್ರಿಯೆ ನಡೆಯುತ್ತಿರುವಾಗ ಈ ಅರ್ಜಿಯನ್ನು ಹೇಗೆ ಸಮರ್ಥಿಸಿಕೊಳ್ಳಬಹುದು ಎಂದು ಪ್ರಶ್ನಿಸಿದೆ.

ನಟರಾಜನ್ ಪರ ಹಿರಿಯ ವಕೀಲರಾದ ಅಭಿಷೇಕ್ ಸಿಂಘ್ವಿ ಹಾಜರಿದ್ದು, ಜನತಾ ಪ್ರಾತಿನಿಧ್ಯ ಕಾಯ್ದೆಯಡಿ ಕ್ರಿಮಿನಲ್ ಪ್ರಕರಣವನ್ನು ಬಹಿರಂಗಪಡಿಸದಿರುವ ಆರೋಪದ ಮೇಲೆ ಚುನಾವಣಾಧಿಕಾರಿ ನಾಮಪತ್ರವನ್ನು ತಪ್ಪಾಗಿ ತಿರಸ್ಕರಿಸಿದ್ದಾರೆ. ತಮ್ಮ ಅರ್ಜಿಯನ್ನು ಪಟ್ಟಿ ಮಾಡದಿರುವ ಬಗ್ಗೆ ಪರಿಗಣಿಸಿ, ವಿಚಾರಣೆಗೆ ಮುಂದಾಗಬೇಕು ಎಂದು ಒತ್ತಾಯಿಸಿದರು.

ರಾಜ್ಯಸಭಾ ಚುನಾವಣಾ ರಿಟರ್ನಿಂಗ್ ಅಧಿಕಾರಿ ಅರವಿಂದ್ ಶರ್ಮಾ ಹೊರಡಿಸಿದ ಆದೇಶದಲ್ಲಿ, ಲಭ್ಯವಿರುವ ದಾಖಲೆಗಳನ್ನು ಪರಿಶೀಲಿಸಿದ ನಂತರ, ಮೀನಾಕ್ಷಿ ನಟರಾಜನ್ ಅವರು ಅಪೂರ್ಣ ಅಫಿಡವಿಟ್ ಸಲ್ಲಿಸಿದ್ದಾರೆ ಎಂದು ಕಂಡುಬಂದಿದೆ. ನಟರಾಜನ್ ಅವರು ನಾಮಪತ್ರದೊಂದಿಗೆ ಸಲ್ಲಿಸಿದ ನಮೂನೆ 26ರಲ್ಲಿ ನ್ಯಾಯಾಲಯದ ದೂರನ್ನು ಬಿಟ್ಟು ಅಪೂರ್ಣ ಅಫಿಡವಿಟ್ ಸಲ್ಲಿಸಿದ್ದಾರೆ ಎಂದು ತಿಳಿಸಿದ್ದರು.ಮಧ್ಯ ಪ್ರದೇಶ ವಿಧಾನಸಭಾ ಅಧಿಕಾರಿಗಳ ಪ್ರಕಾರ, ಮೀನಾಕ್ಷಿ ನಟರಾಜ್ ಅವರು ತೆಲಂಗಾಣದಲ್ಲಿ ತಮ್ಮ ವಿರುದ್ಧ ದಾಖಲಾಗಿರುವ ಪ್ರಕರಣವನ್ನು ತಮ್ಮ ಅಫಿಡವಿಟ್‌ನಲ್ಲಿ ಉಲ್ಲೇಖಿಸಿಲ್ಲ ಎಂದು ಆಡಳಿತರೂಢ ಬಿಜೆಪಿ ಅಭ್ಯರ್ಥಿ ಮಹೇಶ್ ಕೆವಾತ್ ದೂರಿದ್ದರು. ಅಭ್ಯರ್ಥಿಯೊಬ್ಬರು ಕನಿಷ್ಠ ಎರಡು ವರ್ಷಗಳ ಶಿಕ್ಷೆ ವಿಧಿಸಬಹುದಾದ ಕ್ರಿಮಿನಲ್ ಪ್ರಕರಣವನ್ನು ಬಹಿರಂಗಪಡಿಸಬೇಕು. ಪ್ರಸ್ತುತ ವಿಷಯದಲ್ಲಿ ಸಮನ್ಸ್ ಮಾತ್ರ ನೀಡಲಾಗಿದೆ ಎಂದು ಸಿಂಘ್ವಿ ವಾದಿಸಿದರು.ಚುನಾವಣಾ ಆಯೋಗದ ಪರವಾಗಿ ಹಾಜರಾದ ಹಿರಿಯ ವಕೀಲ ಡಿ ಎಸ್ ನಾಯ್ಡು,

ಅರ್ಜಿಯ ಉಲ್ಲೇಖವನ್ನು ವಿರೋಧಿಸಿದನ್ನು ಚುನಾವಣಾ ಆಯೋಗಕ್ಕೆ ಅರ್ಜಿಯ ಪ್ರತಿಯನ್ನು ನೀಡಲಾಗಿಲ್ಲ ಎಂದರು. ವಾದ - ಪ್ರತಿವಾದಗಳ ಬಳಿಕ ಪೀಠ ಈ ಕುರಿತು ನಾಳೆಗೆ ಅರ್ಜಿ ವಿಚಾರಣೆ ನಡೆಸಲು ಸಮ್ಮತಿಸಿತು. ಮಧ್ಯ ಪ್ರದೇಶದ ಮೂರು ರಾಜ್ಯಸಭಾ ಸ್ಥಾನಗಳಿಗೆ ಜೂನ್ 18 ರಂದು ಚುನಾವಣೆ ನಡೆಯಲಿದೆ. ಜೂನ್ 8 ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕವಾಗಿದ್ದು, ಮಂಗಳವಾರದಿಂದ ನಾಮಪತ್ರಗಳ ಪರಿಶೀಲನೆ ನಡೆದಿತ್ತು.

# ಎಸ್‌ಬಿಐ ಫೌಂಡೇಶನ್ ಸಹಯೋಗದಲ್ಲಿ ಉಚಿತ ಆರೋಗ್ಯ ಸೇವೆ




■ ಕನ್ನಡ ಮಾತೃ ಭೂಮಿ ವಾರ್ತೆ

**ದೇವದುರ್ಗ,ಜೂ.11**-ಹಾಗೂ ಅರಕೇರ ತಾಲ್ಲೂಕಿನ ಗ್ರಾಮೀಣ ಜನರಿಗೆ ಸಂಜೀವಿನಿ ಕ್ಲಿನಿಕ್ ಆನ್ ವೀಲ್ಸ್ ಮೂಲಕ ಉಚಿತ ಆರೋಗ್ಯ ಸೇವೆಗಳು,

ಎಸ್‌ಬಿಐ ಫೌಂಡೇಶನ್ ಅವರ ಆರ್ಥಿಕ ಸಹಾಯದೊಂದಿಗೆ, ಅವಾರ್ಡ್ ಸ್ವಯಂಸೇವಾ ಸಂಸ್ಥೆಯ ವತಿಯಿಂದ ರಾಯಚೂರು ಜಿಲ್ಲೆಯ ದೇವದುರ್ಗ ಹಾಗೂ ಅರಕೇರ ತಾಲ್ಲೂಕಿನ 20 ಗ್ರಾಮಗಳಲ್ಲಿ ಎಸ್‌ಬಿಐ ಸಂಜೀವಿನಿ ಕ್ಲಿನಿಕ್ ಆನ್ ವೀಲ್ಸ್ ಎಂಬ ಸಂಚಾರಿ ಆರೋಗ್ಯ ಕೇಂದ್ರವನ್ನು ಕಳೆದ 14 ತಿಂಗಳಿನಿಂದ ಯಶಸ್ವಿಯಾಗಿ ನಡೆಸಲಾಗುತ್ತಿದೆ.

ಈ ಸಂಚಾರಿ ಆರೋಗ್ಯ ಕೇಂದ್ರದ ಮೂಲಕ 6 ಮಂದಿ ಸದಸ್ಯರ ತಂಡವು ಪ್ರತಿದಿನ ಎರಡು ಗ್ರಾಮಗಳಿಗೆ ಭೇಟಿ ನೀಡಿ ಗ್ರಾಮೀಣ ಜನರಿಗೆ ಉಚಿತ ವೈದ್ಯಕೀಯ ಸೇವೆಗಳನ್ನು ಒದಗಿಸುತ್ತಿದೆ. ಈ ತಂಡದಲ್ಲಿ ವೈದ್ಯರು, ನರ್ಸ್, ಲ್ಯಾಬ್ ಟೆಕ್ನೀಷಿಯನ್, ಫಾರ್ಮಸಿಸ್ಟ್, ಕಾರ್ಯಕ್ರಮ ಸಂಯೋಜಕರು ಮತ್ತು ಚಾಲಕರು ಕಾರ್ಯನಿರ್ವಹಿಸುತ್ತಿದ್ದಾರೆ.

ಗ್ರಾಮಗಳಿಗೆ ನೇರವಾಗಿ ತೆರಳಿ ರೋಗಿಗಳ ಆರೋಗ್ಯ ತಪಾಸಣೆ ಮಾಡಲಾಗುತ್ತಿದೆ. ಅಗತ್ಯವಿರುವವರಿಗೆ ಲ್ಯಾಬ್ ಪರೀಕ್ಷೆಗಳನ್ನು ನಡೆಸಿ, ಉಚಿತವಾಗಿ ಔಷಧಿಗಳನ್ನು ವಿತರಿಸಲಾಗುತ್ತಿದೆ. ವಿಶೇಷವಾಗಿ ದೂರದ ಮತ್ತು ಹಿಂದುಳಿದ ಗ್ರಾಮಗಳಲ್ಲಿ ವಾಸಿಸುವ ಬಡ ಮತ್ತು ಸಾಮಾನ್ಯ ಜನರಿಗೆ ಈ ಸೇವೆಗಳು ಬಹಳ ಉಪಯುಕ್ತವಾಗಿವೆ.

ಕಳೆದ 14 ತಿಂಗಳ ಅವಧಿಯಲ್ಲಿ ಒಟ್ಟು 31,419 ಮಂದಿಗೆ ವಿವಿಧ ಆರೋಗ್ಯ ಮತ್ತು ಜಾಗೃತಿ ಸೇವೆಗಳನ್ನು ಒದಗಿಸಲಾಗಿದೆ. ಇದರಲ್ಲಿ ಮೊಬೈಲ್ ಮೆಡಿಕಲ್ ಯುನಿಟ್ ಮೂಲಕ 10,226 ಮಂದಿಗೆ ನೇರ ವೈದ್ಯಕೀಯ ಸೇವೆಗಳು ಒದಗಿಸಲಾಗಿದೆ. ವಿವಿಧ ಆರೋಗ್ಯ ಜಾಗೃತಿ ಕಾರ್ಯಕ್ರಮಗಳ ಮೂಲಕ 1,094 ಮಂದಿಗೆ ಅರಿವು ಮೂಡಿಸಲಾಗಿದೆ. ಸ್ವಚ್ಛ ಭಾರತ್ ಕಾರ್ಯಕ್ರಮದ ಭಾಗವಾಗಿ 832 ಮಂದಿಗೆ ಸ್ವಚ್ಛತೆ ಮತ್ತು ಆರೋಗ್ಯ ಸಂಬಂಧಿತ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗಿದೆ. ವಿಶೇಷ ವೈದ್ಯಕೀಯ ಶಿಬಿರಗಳ ಮೂಲಕ 914 ಮಂದಿಗೆ ತಪಾಸಣೆ ಮತ್ತು ಚಿಕಿತ್ಸೆ ನೀಡಲಾಗಿದೆ.

ಇದರ ಜೊತೆಗೆ, ಒಟ್ಟು 4,610 ಮಂದಿಗೆ ಲ್ಯಾಬ್ ಪರೀಕ್ಷೆಗಳು ನಡೆಸಲಾಗಿದೆ. ಪರೀಕ್ಷಾ ಫಲಿತಾಂಶಗಳ ಆಧಾರದ ಮೇಲೆ ಅಗತ್ಯವಿರುವ ರೋಗಿಗಳಿಗೆ ಸೂಕ್ತ ಔಷಧಿಗಳನ್ನು ಉಚಿತವಾಗಿ ವಿತರಿಸಲಾಗಿದೆ. ರೋಗ ನಿಯಂತ್ರಣಕ್ಕೆ ಬರುವವರೆಗೆ ಅಥವಾ ಸಂಪೂರ್ಣವಾಗಿ ಗುಣಮುಖರಾಗುವವರೆಗೆ ನಿರಂತರವಾಗಿ ಔಷಧಿ ಮತ್ತು ವೈದ್ಯಕೀಯ ಸಲಹೆಗಳನ್ನು ನೀಡಲಾಗುತ್ತಿದೆ.

ಈ ಕೇಂದ್ರದ ಮೂಲಕ ರಕ್ತಹೀನತೆ, ಥೈರಾಯ್ಡ್, ರಕ್ತದ ಒತ್ತಡ, ಮಧುಮೇಹ, ಚರ್ಮರೋಗಗಳು, ಸಂಧಿ ನೋವು, ಕಣ್ಣಿನ ಸಮಸ್ಯೆಗಳು, ಋತುಮಾನಿಕ ಕಾಯಿಲೆಗಳು ಹಾಗೂ ಮಕ್ಕಳಿಗೆ ಸಂಬಂಧಿಸಿದ ಕಾಯಿಲೆಗಳಿಗೆ ನಿಯಮಿತವಾಗಿ ಚಿಕಿತ್ಸೆ ನೀಡಲಾಗುತ್ತಿದೆ. ಇದರ ಜೊತೆಗೆ ವಿಶೇಷ ವೈದ್ಯಕೀಯ ಶಿಬಿರಗಳನ್ನೂ ಆಯೋಜಿಸಲಾಗಿದೆ.

ಭಾರತ ಸರ್ಕಾರದ ಮಹತ್ವದ ಸ್ವಚ್ಛ ಭಾರತ್ ಕಾರ್ಯಕ್ರಮದ ಭಾಗವಾಗಿ ಶಾಲಾ ಮಕ್ಕಳಿಗೆ ಮತ್ತು ಗ್ರಾಮಸ್ಥರಿಗೆ ಸ್ವಚ್ಛತೆ ಹಾಗೂ ಆರೋಗ್ಯದ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಚೇರಿಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಕಸದ ಬುಟ್ಟಿಗಳನ್ನು ಅಳವಡಿಸಲಾಗಿದೆ. ಗ್ರಾಮ ಮಟ್ಟದಲ್ಲಿ ಕೆಲಸ ಮಾಡುವ ಪೌರ ಕಾರ್ಮಿಕರಿಗೆ ರಕ್ಷಣಾ ಕಿಟ್‌ಗಳನ್ನು ವಿತರಿಸಲಾಗಿದೆ.

ಕಳೆದ 14 ತಿಂಗಳಿನಿಂದ ನಡೆದ ಈ ಆರೋಗ್ಯ ಮತ್ತು ಜಾಗೃತಿ ಕಾರ್ಯಕ್ರಮಗಳ ಬಗ್ಗೆ ಗ್ರಾಮಸ್ಥರು ಸಂತೋಷ ವ್ಯಕ್ತಪಡಿಸಿದ್ದಾರೆ. ಅತ್ಯವಶ್ಯಕ ಸಂದರ್ಭದಲ್ಲಿ ಸಮೀಪದ ತಾಲ್ಲೂಕು ಆಸ್ಪತ್ರೆ ಅಥವಾ ಖಾಸಗಿ ಆಸ್ಪತ್ರೆಗೆ ಹೋಗಲು ಸಾರಿಗೆ ವೆಚ್ಚ, ರಕ್ತ ಪರೀಕ್ಷೆ ಮತ್ತು ಇತರೆ ವೈದ್ಯಕೀಯ ವೆಚ್ಚಗಳು ಸೇರಿ ವರ್ಷಕ್ಕೆ ಸುಮಾರು ₹10,000 ಕ್ಕಿಂತ ಹೆಚ್ಚು ಖರ್ಚಾಗುತ್ತಿತ್ತು. ಆದರೆ ಎಸ್‌ಬಿಐ ಫೌಂಡೇಶನ್ ಬೆಂಬಲದ ಈ ಮೊಬೈಲ್ ಮೆಡಿಕಲ್ ಯುನಿಟ್ ನಮ್ಮ ಗ್ರಾಮಕ್ಕೇ ಬಂದು ಉಚಿತ ವೈದ್ಯಕೀಯ ಸೇವೆ ನೀಡುತ್ತಿರುವುದರಿಂದ ಆ ಖರ್ಚು ಬಹಳಷ್ಟು ಕಡಿಮೆಯಾಗಿದೆ, ಎಂದು ಗ್ರಾಮಸ್ಥರು ಅಭಿಪ್ರಾಯಪಟ್ಟಿದ್ದಾರೆ.

ತಮ್ಮ ಗ್ರಾಮದಲ್ಲಿಯೇ ವೈದ್ಯಕೀಯ ಸೇವೆಗಳು ಲಭ್ಯವಾಗುತ್ತಿರುವುದರಿಂದ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆಯಲು ಸಾಧ್ಯವಾಗಿದೆ ಎಂದು ಗ್ರಾಮಸ್ಥರು ಸಂತೋಷದಿಂದ ತಿಳಿಸಿದ್ದಾರೆ. ಈ ಯೋಜನೆ ಗ್ರಾಮೀಣ ಪ್ರದೇಶದ ಜನರ ಆರೋಗ್ಯ ರಕ್ಷಣೆ, ಆರ್ಥಿಕ ಉಳಿತಾಯ, ಸಮಯ ಉಳಿತಾಯ ಮತ್ತು ಆರೋಗ್ಯ ಜಾಗೃತಿ ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ.

ಎಸ್‌ಬಿಐ ಫೌಂಡೇಶನ್ ಅವರ ಸಹಕಾರದಿಂದ ಅವಾರ್ಡ್ ಸಂಸ್ಥೆ ನಡೆಸುತ್ತಿರುವ ಈ ಸಂಜೀವಿನಿ ಕ್ಲಿನಿಕ್ ಆನ್ ವೀಲ್ಸ್ ಕಾರ್ಯಕ್ರಮವು ದೇವದುರ್ಗ ತಾಲ್ಲೂಕಿನ ಗ್ರಾಮೀಣ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಗ್ರಾಮ ಮಟ್ಟದಲ್ಲೇ ತಲುಪಿಸುವ ಮಾದರಿ ಕಾರ್ಯಕ್ರಮವಾಗಿ ರೂಪುಗೊಂಡಿದೆ.

# ನಾನು ನಿಮ್ಮಂತೆ ಮಾಫಿಯಾ ಹಿತಾಸಕ್ತಿ ಕಾಯುವ ಕಮಿಷನ್ ಏಜೆಂಟ್ ಅಲ್ಲ: ಡಿಕೆಶಿಗೆ ಆರ್.ಅಶೋಕ್ ತಿರುಗೇಟು

**ಬೆಂಗಳೂರು,ಜೂ.11**-ಹೌದು, ನಾನು ಏಜೆಂಟ್ ಆಗಿಯೇ ಮಾತನಾಡುತ್ತಿದ್ದೇನೆ. ಆದರೆ ನಿಮ್ಮ ತರಹ ಯಾವುದೋ ಮಾಫಿಯಾ ಹಿತಾಸಕ್ತಿ ಕಾಯುವ ಕಮಿಷನ್ ಏಜೆಂಟ್ ಆಗಿ ಅಲ್ಲ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಇಂದು ತಿರುಗೇಟು ನೀಡಿದ್ದಾರೆ.

ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಆರ್.ಅಶೋಕ್ ಕಸದ ಮಾಫಿಯಾ ಏಜೆಂಟ್ ಆಗಿ ಮಾತನಾಡುತ್ತಿದ್ದಾರೆ ಎಂಬ ಸಿಎಂ ಹೇಳಿಕೆಗೆ ಪ್ರತಿಕ್ರಿಯಿಸುತ್ತಾ, ಕರ್ನಾಟಕದ ಏಳೂವರೆ ಕೋಟಿ ಕನ್ನಡಿಗರ ಹಕ್ಕಿಗಾಗಿ, ಬೆಂಗಳೂರಿನ ಒಂದೂವರೆ ಕೋಟಿ ನಾಗರಿಕರ ಧ್ವನಿಯಾಗಿ ನಿಂತಿರುವ ಜನತಾ ಏಜೆಂಟ್ ನಾನು. ವಿಪಕ್ಷ ನಾಯಕನಾಗಿ ನಿಮ್ಮ ಲೂಟಿ-ದಂಧೆಯನ್ನು ಪ್ರಶ್ನಿಸುವುದು ನನ್ನ ಸಂವಿಧಾನಬದ್ಧ ಕರ್ತವ್ಯ, ಅದಕ್ಕೆ ಯಾರ ಅಪ್ಪಣೆಯೂ ಬೇಕಿಲ್ಲ ಎಂದು ಟೀಕಾಪ್ರಹಾರ ನಡೆಸಿದ್ದಾರೆ.

ಹೈಕಮಾಂಡ್ ಬಾಗಿಲಲ್ಲಿ ಕಾಡಿ-ಬೇಡಿ, ಅತ್ತು-ಕರೆದು, ಕೊನೆಗೂ ಸಿಎಂ ಸೀಟು ಗಿಟ್ಟಿಸಿಕೊಂಡಿರುವ ತಮಗೆ ವಿಪಕ್ಷಗಳು ಕನಿಷ್ಠ 'ಹನಿಮೂನ್ ಪೀರಿಯಡ್' ಕೂಡ ಕೊಡುತ್ತಿಲ್ಲವಲ್ಲ ಎಂಬ ಹತಾಶೆ, ಭಯ,

ಆತಂಕವಾಗುತ್ತಿದೆ ಎಂದು ನನಗೆ ಅರ್ಥವಾಗುತ್ತದೆ. ಆದರೆ ನಿಮ್ಮ ಸ್ವಂತ ಪಕ್ಷದ ಶಾಸಕರೇ ದಿನಬೆಳಗಾದರೆ ಮಾಧ್ಯಮಗಳ

ಮುಂದೆ ನಿಮ್ಮ ವಿರುದ್ಧ ಅಸಮಾಧಾನದ ಜಾಗಟೆ ಬಾರಿಸುತ್ತಾ, ದೆಹಲಿಗೆ ದಂಡೆತ್ತಿ ಹೋಗುತ್ತಿರುವಾಗ ನಿಮಗೆ ಹನಿಮೂನ್ ಪೀರಿಯಡ್ ಎಲ್ಲಿಂದ ಸಿಗಬೇಕು ಡಿ.ಕೆ.ಶಿವಕುಮಾರ್ ಅವರೇ? ನಿಮ್ಮ ಮನೆಯಲ್ಲೇ ಬೆಂಕಿ ಉರಿಯುತ್ತಿರುವಾಗ ನನ್ನ ಮೇಲೆ ರಾಜಕೀಯ ಗೂಬೆ ಕೂರಿಸಬೇಡಿ ಎಂದು ಕಿಡಿಕಾರಿದ್ದಾರೆ.

ನಮ್ಮ ಪಾರದರ್ಶಕತೆ, ಕಾರ್ಯವೈಖರಿ ಸಹಿಸಲು ಅವರಿಂದ ಸಾಧ್ಯವಾಗುತ್ತಿಲ್ಲ ಎಂಬ ನಿಮ್ಮ ಹೇಳಿಕೆ ಶತಮಾನದ ಅತಿ ದೊಡ್ಡ ಹಾಸ್ಯ. ನಿಮ್ಮ ಹಿನ್ನೆಲೆ ಏನು, ನಿಮ್ಮ 'ಆಡಳಿತ ವೈಖರಿ'ಯ ಅಸಲಿ ಚರಿತ್ರೆ ಏನು, ತಾವು ಕಟ್ಟಿಕೊಂಡಿರುವ ಪಾರದರ್ಶಕ ಸಾಮ್ರಾಜ್ಯ ಎಂಥದ್ದು ಎಂಬುದು



ಇಡೀ ಕರ್ನಾಟಕಕ್ಕೆ ಗೊತ್ತಿದೆ. ನಿಮ್ಮಿಂದ ಪಾರದರ್ಶಕತೆಯ ಪಾಠ ಕಲಿಯುವ ದೌರ್ಭಾಗ್ಯ ಕನ್ನಡಿಗರಿಗಿಲ್ಲ ಎಂದಿದ್ದಾರೆ.

ಟೆಂಡರ್ ನಿಯಮಗಳ ಅಕ್ರಮವನ್ನು ಮುಚ್ಚಿಹಾಕಲು ನೀವೇ ಸ್ವತಃ ಉನ್ನತ ಮಟ್ಟದ ಸಮಿತಿ ರಚಿಸಿ, ವರದಿ ನೀಡಲು ಕೊಟ್ಟಿದ್ದ ಒಂದು ವಾರದ ಗಡುವು ಇಂದಿಗೆ ಮುಕ್ತಾಯವಾಗಿದೆ.

ತಾಕತ್ತಿದ್ದರೆ, ನಿಮ್ಮಲ್ಲಿ ಕಿಂಚಿತ್ತಾದರೂ ಪಾರದರ್ಶಕತೆ ಉಳಿದಿದ್ದರೆ, ಆ ವರದಿಯನ್ನು

ಅಡಗಿಸಿಡದೆ ತಕ್ಷಣ ಬಹಿರಂಗಪಡಿಸಿ. ವರದಿಯನ್ನು ಇಡೀ ರಾಜ್ಯದ ಜನರ ಮುಂದಿಡಿ. ನಿಮ್ಮ 'ಅಸಲಿ ಮುಖವಾಡ'

ಕಳಚಿ ಬೀಳಲಿ, ಯಾರ ಕಾರ್ಯವೈಖರಿ ಎಂಥದ್ದು ಅಂತ ಜನರೇ ತೀರ್ಮಾನಿಸಲಿ ಎಂದು ಆರ್. ಅಶೋಕ್ ಸವಾಲು ಹಾಕಿದ್ದಾರೆ.

# ಲೋಕಾ ಬಲೆಗೆ ಬಿದ್ದ ಇಬ್ಬರು ಸರ್ಕಾರಿ ಸಿಬ್ಬಂದಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಚಿಕ್ಕಮಗಳೂರು,ಜೂ.11**-ಜಮೀನಿನ ಸ್ಕೆಚ್ ತಯಾರಿಸುವ ಕೆಲಸಕ್ಕಾಗಿ ರೈತನೊಬ್ಬರಿಂದ ಲಂಚಕ್ಕೆ ಬೇಡಿಕೆ ಇಟ್ಟಿದ್ದ ಆರೋಪದ ಮೇಲೆ ಮೂಡಿಗೆರೆ ಕಚೇರಿಯ ಇಬ್ಬರು ಸರ್ಕಾರಿ ಸಿಬ್ಬಂದಿಯನ್ನು ಲೋಕಾಯುಕ್ತ ಅಧಿಕಾರಿಗಳು ಬಲೆಗೆ ಬೀಳಿಸಿ ಬಂಧಿಸಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ನಡೆದಿದೆ.




ಬಂಧಿತರನ್ನು ಎಡಿಎಲ್‌ಆರ್ ಮಂಜೇಶ್ ಹಾಗೂ ಕೇಸ್ ವರ್ಕರ್ ಸುಮಾ ಎಂದು ಗುರುತಿಸಲಾಗಿದೆ. ಜಮೀನಿನ ಸ್ಕೆಚ್ ತಯಾರಿಕೆ ಮತ್ತು ಸಂಬಂಧಿತ ದಾಖಲೆಗಳ ಪ್ರಕ್ರಿಯೆ ಪೂರ್ಣಗೊಳಿಸುವುದಕ್ಕಾಗಿ ರೈತರಿಂದ ಹಣಕ್ಕೆ ಬೇಡಿಕೆ ಇಟ್ಟಿದ್ದ ಆರೋಪ ಇವರ ವಿರುದ್ಧ ಕೇಳಿಬಂದಿದೆ.

ರೈತನಿಂದ ₹20 ಸಾವಿರ ಲಂಚಕ್ಕೆ ಬೇಡಿಕೆ : ಮೂಲಗಳ ಪ್ರಕಾರ, ಮೂಡಿಗೆರೆ ತಾಲ್ಲೂಕಿನ ರೈತ ಡಿ.ಡಿ. ಮಂಜುನಾಥ್ ಅವರ ಜಮೀನಿನ ಸ್ಕೆಚ್ ತಯಾರಿಸುವ ಕಾರ್ಯಕ್ಕೆ ಸಂಬಂಧಿಸಿದಂತೆ ಎಡಿಎಲ್ ಆರ್ ಮಂಜೇಶ್ ಹಾಗೂ ಕೇಸ್ ವರ್ಕರ್ ಸುಮಾ ಅವರು ₹20 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ.

ಸರ್ಕಾರಿ ಕೆಲಸಕ್ಕೆ ಅನಗತ್ಯ ವಿಳಂಬ ಮಾಡಲಾಗುತ್ತಿದೆ ಎಂದು ಆರೋಪಿಸಿದ ರೈತರು ಈ ಬಗ್ಗೆ ಲೋಕಾಯುಕ್ತ ಅಧಿಕಾರಿಗಳ ಮೊರೆ ಹೋಗಿದ್ದರು. ಲೋಕಾಯುಕ್ತರಿಗೆ ದೂರು : ಲಂಚದ ಬೇಡಿಕೆಯಿಂದ ಬೇಸತ್ತ ರೈತ ಡಿ.ಡಿ. ಮಂಜುನಾಥ್ ಅವರು ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದರು. ದೂರಿನ ಪರಿಶೀಲನೆ ನಡೆಸಿದ ಅಧಿಕಾರಿಗಳು ಆರೋಪದ ಬಗ್ಗೆ ಪ್ರಾಥಮಿಕ ಮಾಹಿತಿ ಸಂಗ್ರಹಿಸಿ, ದಾಳಿ ನಡೆಸಲು ಯೋಜನೆ ರೂಪಿಸಿದರು.15 ಸಾವಿರ ಸ್ವೀಕರಿಸುವಾಗ ಬಲೆ: ಲೋಕಾಯುಕ್ತ ಅಧಿಕಾರಿಗಳು ರೂಪಿಸಿದ ಕಾರ್ಯಾಚರಣೆಯಂತೆ ಇಂದು ಇಬ್ಬರು ಸಿಬ್ಬಂದಿ ₹15 ಸಾವಿರ ಲಂಚದ ಹಣವನ್ನು ಸ್ವೀಕರಿಸುತ್ತಿದ್ದ ವೇಳೆ ದಾಳಿ ನಡೆಸಲಾಯಿತು. ಹಣ ಪಡೆಯುತ್ತಿದ್ದ ಸಂದರ್ಭದಲ್ಲೇ ಅಧಿಕಾರಿಗಳು ಅವರನ್ನು ರೆಡ್‌ಹ್ಯಾಂಡ್ ಆಗಿ ಹಿಡಿದು ಬಂಧಿಸಿದರು. ಈ ಕಾರ್ಯಾಚರಣೆಯಲ್ಲಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದ್ದು, ಆರೋಪಿಗಳ ವಿರುದ್ಧ ಭ್ರಷ್ಟಾಚಾರ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ.

# ಬೆಳಗಾವಿಯಲ್ಲಿ ಉಡುಪಿ ಮೂಲದ ನವ ವಿವಾಹಿತೆ ಆತ್ಮಹತ್ಯೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಬೆಳಗಾವಿ,ಜೂ.11**-ಇಲ್ಲಿಯ ಮಹಾದ್ವಾರ ರಸ್ತೆಗೆ ಹೊಂದಿಕೊಂಡ ಅಪ್ಟೇಕರ್ ಗಲ್ಲಿಯಲ್ಲಿ ಮಂಗಳವಾರ ಉಡುಪಿ ಜಿಲ್ಲೆ ಹೆಬ್ರಿ ತಾಲೂಕು ಮುನಿಯಾಲು ಮೂಲದ ನವ ವಿವಾಹಿತೆ ಆತ್ಮಹತ್ಯೆ ಮಾಡಿಕೊಂಡ ಘಟನೆ ನಡೆದಿದೆ.



ರಕ್ಷಿತಾ ಪೂಜಾರಿ (29) ಆತ್ಮಹತ್ಯೆ ಮಾಡಿಕೊಂಡವರು. ಒಂದು ತಿಂಗಳ ಹಿಂದಷ್ಟೇ ಮಂಜುನಾಥ ಪೂಜಾರಿ ಎಂಬವರೊಂದಿಗೆ ಅವರ ವಿವಾಹ ನೆರವೇರಿತ್ತು. ರಕ್ಷಿತಾ ಖಾಸಗಿ ಕಂಪನಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದು ಸದ್ಯ ವರ್ಕ್ ಫ್ರಮ್ ಹೋಂ ಮೂಲಕ ಕೆಲಸ ಮಾಡುತ್ತಿದ್ದರು. ರವಿವಾರ ಬೆಳಗ್ಗೆ ತನ್ನ ತಾಯಿಗೆ ಕರೆ ಮಾಡಿದ್ದ ಅವರು ಗಂಡನ ಮನೆಯಲ್ಲಿ ಇರುವುದಾಗಿ ತಿಳಿಸಿದ್ದಾರೆ. ಸಂಜೆವರೆಗೆ ಫೋನ್ ಸಂಪರ್ಕ ಮಾಡಿದ್ದರೂ ರಕ್ಷಿತಾ ಫೋನ್ ಕರೆ ಸ್ವೀಕರಿಸಿರಲಿಲ್ಲ. ಇದರಿಂದ ಕುಟುಂಬಸ್ಥರು ಅನುಮಾನಗೊಂಡಿದ್ದಾರೆ. ಕೊನೆಗೆ ಮನೆಯ ಕಿಟಕಿಯಿಂದ ಗಮನಿಸಿದಾಗ ರಕ್ಷಿತಾ ತನ್ನ ಚೂಡಿದಾರ ಶಾಲನ್ನು ಕುತ್ತಿಗೆಗೆ ಬಿಗಿದು ಫ್ಯಾನ್ ಗೆ ನೇಣು ಹಾಕಿ ಆತ್ಮಹತ್ಯೆ ಮಾಡಿಕೊಂಡಿರುವುದು ಕಂಡುಬಂದಿದೆ. ಮಾರ್ಕೆಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ರಕ್ಷಿತಾ ಅವರ ಕುಟುಂಬ ಶಿವಾಜಿನಗರದವರಾಗಿದ್ದು ಪತಿ ಉದ್ಯಮ ಬಾಗನಲ್ಲಿ ಕೆಲಸ ಮಾಡುತ್ತಿದ್ದಾರೆ. ಮಂಗಳವಾರ ಪತಿ ಕೆಲಸಕ್ಕೆ ಹೋದ ನಂತರ ರಕ್ಷಿತಾ ಈ ಕೃತ್ಯ ಎಸಗಿದ್ದಾರೆ. ಮಧ್ಯಾಹ್ನ ಅವರ ಪತಿ ಮನೆಗೆ ಬಂದು ನೋಡಿದಾಗ ರಕ್ಷಿತಾ ನೇಣು ಬಿಗಿದುಕೊಂಡಿರುವುದು ಕಂಡು ಬಂದಿದೆ.

# ಪ್ರಧಾನಿ ಮೋದಿ ಭೇಟಿ ಮಾಡಿದ ಡಿಕೆಶಿ ರಾಜ್ಯದ ಅಭಿವೃದ್ಧಿಗೆ ಸಹಕಾರ ಕೋರಿದ ಸಿಎಂ

**ನವದೆಹಲಿ,ಜೂ.11**-ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಇದೇ ಮೊದಲ ಬಾರಿಗೆ ದೆಹಲಿಯಲ್ಲಿ ಗುರುವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ ಡಿಕೆ ಶಿವಕುಮಾರ್ ಅವರು, ರಾಜ್ಯದ ಅಭಿವೃದ್ಧಿಗೆ ಸಹಕಾರ ಕೋರಿದ್ದಾರೆ.



ಮೂಲಸೌಕರ್ಯ, ಹೂಡಿಕೆ, ನೀರಾವರಿ, ನಾವೀನ್ಯತೆ ಮತ್ತು ನಮ್ಮ ಜನರ ಜೀವನದ ಮೇಲೆ ನೇರವಾಗಿ ಪರಿಣಾಮ ಬೀರುವ ಉಪಕ್ರಮಗಳು ಸೇರಿದಂತೆ ಕರ್ನಾಟಕದ ಅಭಿವೃದ್ಧಿ ಆದ್ಯತೆಗಳ ಕುರಿತು ಪ್ರಧಾನಿಯೊಂದಿಗೆ ರಚನಾತ್ಮಕ ಚರ್ಚೆ ನಡೆಸಿದೆ ಎಂದು ಸಿಎಂ ಡಿಕೆ ಶಿವಕುಮಾರ್ ಅವರು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ.

ಕರ್ನಾಟಕವು ಯಾವಾಗಲೂ ಭಾರತದ ಬೆಳವಣಿಗೆಗೆ ಪ್ರಮುಖ ಕೊಡುಗೆ ನೀಡಿದೆ ಮತ್ತು ಆ ಪಾತ್ರವನ್ನು ಮತ್ತಷ್ಟು ಬಲಪಡಿಸುವ ನಮ್ಮ ಬದ್ಧತೆಯನ್ನು ನಾನು ಪುನರುಚ್ಚರಿಸಿದೆ. ಅಭಿವೃದ್ಧಿಯನ್ನು ವೇಗಗೊಳಿಸಲು, ಹೆಚ್ಚಿನ ಅವಕಾಶಗಳನ್ನು ಆಕರ್ಷಿಸಲು ಮತ್ತು ಕರ್ನಾಟಕದ ಜನರ ಆಕಾಂಕ್ಷೆಗಳನ್ನು ಪೂರೈಸಲು ಸಹಕಾರಿ ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರದೊಂದಿಗೆ ನಿಕಟವಾಗಿ ಕೆಲಸ ಮಾಡಲು ನಾನು ಎದುರು ನೋಡುತ್ತಿದ್ದೇನೆ ಎಂದು ಡಿಕೆಶಿ ಹೇಳಿದ್ದಾರೆ.

ಬೆಂಗಳೂರು ಅಭಿವೃದ್ಧಿ ಮತ್ತು ನೀರಾವರಿ ಯೋಜನೆಗಳ ಬಗ್ಗೆ ಚರ್ಚೆ

ಈ ಭೇಟಿಯ ಬಳಿಕ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡ ಮುಖ್ಯಮಂತ್ರಿಗಳು, ಕರ್ನಾಟಕದ ಮೂಲಸೌಕರ್ಯ, ಹೂಡಿಕೆ, ನಗರಾಭಿವೃದ್ಧಿ, ನೀರಾವರಿ ಮತ್ತು ತಂತ್ರಜ್ಞಾನ ಕ್ಷೇತ್ರಗಳ ಪ್ರಗತಿಯ ಬಗ್ಗೆ ಪ್ರಧಾನಿಯವರೊಂದಿಗೆ ಸಕಾರಾತ್ಮಕ ಚರ್ಚೆ ನಡೆಸಲಾಗಿದೆ. ವಿಶೇಷವಾಗಿ ಬೆಂಗಳೂರಿನ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಅಗತ್ಯವಿರುವ ಅರ್ಬನ್ ಮೊಬಿಲಿಟಿ ಯೋಜನೆಗಳು ಹಾಗೂ ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳಿಗೆ ಕೇಂದ್ರದ ಸಹಕಾರ ಕೋರಲಾಗಿದೆ ಎಂದರು.

ಕರಾವಳಿ-ಮಲೆನಾಡಿನ ಅಭಿವೃದ್ಧಿಗೂ ಒತ್ತು

ಕೇಂದ್ರ ಮತ್ತು ರಾಜ್ಯ ಸರ್ಕಾರದ ಜಂಟಿ ಸಹಭಾಗಿತ್ವದಲ್ಲಿ ಹೊಸ ಉದ್ಯೋಗಾವಕಾಶಗಳ ಸೃಷ್ಟಿ ಹಾಗೂ ಗ್ರಾಮೀಣ ಕಲ್ಯಾಣ ಯೋಜನೆಗಳನ್ನು ಜಾರಿಗೆ ತರುವ ಬಗ್ಗೆಯೂ ಚರ್ಚಿಸಲಾಗಿದೆ.

ಒಟ್ಟಾರೆಯಾಗಿ ಬಲಿಷ್ಠ ಕರ್ನಾಟಕದ ಮೂಲಕ ಬಲಿಷ್ಠ ಭಾರತವನ್ನು ನಿರ್ಮಿಸುವ ಸಂಕಲ್ಪಕ್ಕೆ ಇಬ್ಬರೂ ನಾಯಕರು ಸಹಮತ ವ್ಯಕ್ತಪಡಿಸಿದರು. ಪ್ರಧಾನಿ ಮೋದಿ ಅವರು ಕೂಡ ರಾಜ್ಯದ ಸರ್ವಾಂಗೀಣ ಪ್ರಗತಿಗೆ ಅಗತ್ಯ ನೆರವು ನೀಡುವ ಭರವಸೆ ನೀಡಿದ್ದಾರೆ ಎನ್ನಲಾಗಿದೆ.

# ರೈತರು ಆರ್ಥಿಕವಾಗಿ ಸದೃಢರಾಗಲು ಶಾಸಕ ಕಂದಕೂರ ಸಲಹೆ


■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.11-**ಸಕಾಲಕ್ಕೆ ಮಳೆ, ಬೆಳೆ ಇಲ್ಲದೆ ಮೊದಲೆ ಸಂಕಷ್ಟದಲ್ಲಿದ್ದಿರಿ, ಸರಕಾರ ನೀಡುವ ಈ ಪರಿಹಾರದ ಹಣವನ್ನು ವ್ಯರ್ಥವಾಗಿ ಹಾಳು ಮಾಡಬೇಡಿ, ಅಗತ್ಯಕ್ಕನುಗುಣವಾಗಿ ಬಳಸಿಕೊಳ್ಳಿ. ಸರಕಾರದ ಸೌವಲತ್ತುಗಳನ್ನು ಸದಪಯೋಗ ಪಡೆಸಿಕೊಂಡು ಆರ್ಥಿಕವಾಗಿ ಸದೃಢರಾಗಬೇಕು ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಸಲಹೆ ನೀಡಿದರು.

ನಗರದ ಶಾಸಕರ ಕಚೇರಿಯಲ್ಲಿ ಪ್ರಕೃತಿ ವಿಕೋಪದಡಿ ಎತ್ತು, ಎಮ್ಮೆ, ಆಕಳು ಮೃತಪಟ್ಟ ಮತಕ್ಷೇತ್ರದ ನಾನಾ ಗ್ರಾಮಗಳ ಸಂತ್ರಸ್ತ ರೈತರಿಗೆ ಪ್ರಕೃತಿ ವಿಕೋಪ ನಿಧಿಯಡಿಯಲ್ಲಿ ಮಂಜೂರಾಗಿರುವ ಪರಿಹಾರ ಚೆಕ್‌ನ್ನು ವಿತರಿಸಿ ಅವರು ಮಾತನಾಡಿದರು.

ಪರಿಹಾರ ಧನವನ್ನು ಸರಿಯಾಗಿ ಬಳಸಿಕೊಂಡು ಮಕ್ಕಳ ವಿದ್ಯಾಭ್ಯಾಸ, ಜೊತೆಗೆ ಕುಟುಂಬದ ಆರ್ಥಿಕ ಸಂಕಷ್ಟವನ್ನೂ ದೂರ ಮಾಡಿಕೊಳ್ಳಬೇಕು, ನಿಮ್ಮ ಜೊತೆ ನಾನಿದ್ದೇನೆ ಯಾವುದಕ್ಕೂ ಎದೆಗುಂದದೆ ಜೀವನ ನಡೆಸಿ, ಕಷ್ಟವಾದರೆ ನನ್ನ ಹತ್ತಿರ ಬನ್ನಿ ಎಂದ ಸಾಂತ್ವಾನ ಹೇಳಿದರು.

ಪ್ರಕೃತಿವಿಕೋಪದಿಂದ ಜಾನುವಾರಗಳು ಸತ್ತರೆ ಅವುಗಳ ಸಾಕಣೆದಾರರಿಗೆ ಸರ್ಕಾರ ಪರಿಹಾರ ವಿತರಿಸುವ ಕೆಲಸ ಮಾಡುತ್ತಿದೆ, ಇದರಿಂದ ಬಡವರು ಜೀವನ ನಡೆಸಲು ಸರಳ ದಾರಿ ಮಾಡಿಕೊಟ್ಟಿದೆ ಎಂದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಸುಭಾ ಶ್ಚಂದ್ರ, ಕಟಕಟಿ, ಈಶ್ವರಸಿಂಗ್ ನಾಯಕ್, ವಿರುಪಾ ಕ್ಷಪ್ಪ ಸಾಹುಕಾರ, ಶರಣರಡ್ಡಿ, ಹಂಪಯ್ಯ, ಸೋಮಯ್ಯ,ಭಾಸ್ಕರ್, ಭಾಗಣ್ಣಗೌಡ ಅಲ್ಲಿಪೂರ, ಯಲ್ಲಾಲಿಂಗ ಗೂಡೂರು, ಶಿವಯೋಗಿ, ಮರೆಪ್ಪ ಚಡಬಾ, ನರಸಿಂಹರಡ್ಡಿ ಚಿಂತಗುಂಟಾ, ಶಿವಶರಣಪ್ಪ, ಭೀಮರಾಯ ಇದ್ಲಿ ಯರಗೋಳ, ನಾಗರಡ್ಡಿ, ಹರ್ಷವರ್ಧನರಡ್ಡಿ, ಶಿವಶರಣಪ್ಪ ಪರಡಿ ಇತರರಿದ್ದರು.



**ಫಲಾನುಭವಿಗಳ ವಿವರ**

ಪ್ರಕೃತಿ ವಿಕೋಪ ಪರಿಹಾರದಡಿ ಯರಗೋಳದಲ್ಲಿ ಮೃತಪಟ್ಟ ದಿ.ಸೋಮರಾಯ ರಾಮಲಿಂಗಪ್ಪ ಕುಟುಂಬಕ್ಕೆ 5 ಲಕ್ಷ, ಅಲ್ಲಿಪೂರದಲ್ಲಿ ಮೃತಪಟ್ಟ ದಿ. ಸುನೀಲ್ ಆನಂದ ರಾಮಣ್ಣೋರ್ ಕುಟುಂಬಕ್ಕೆ 5ಲಕ್ಷ, ಗೊಂದೆಡಗಿಯ ರೈತ ಸಿದ್ದಪ್ಪ ಶಂಕ್ರಪ್ಪ ಹೂಗಾರ ರವರಿಗೆ 3 ಆಕಳು ಮೃಪಟ್ಟಿದ್ದರಿಂದ 75 ಸಾವಿರ, ಗೂಡೂರಿನ ರೈತ ಶೇಖಪ್ಪ ರಾಮಣ್ಣನವರಿಗೆ 1 ಎತ್ತು ಮೃತಪಟ್ಟಿದ್ದರಿಂದ 50 ಸಾವಿರ, ಹತ್ತಿಕುಣಿಯ ರೈತ ಮಲ್ಲಪ್ಪ ಸಲೇರಿಯವರಿಗೆ 1 ಆಡು ಮೃತಪಟ್ಟಿದ್ದರಿಂದ 20 ಸಾವಿರ ಪರಿಹಾರ ಧನ ಚೆಕ್‌ನ್ನು ಶಾಸಕ ಶರಣಗೌಡ ಕಂದಕೂರ ವಿತರಿಸಿದರು.

# ಎಸ್‌ಐಆರ್ ವೇಳಾಪಟ್ಟಿ ಪ್ರಕಟ; ಅಗತ್ಯ ಸಹಕಾರ ನೀಡಲು ಮತದಾರರಿಗೆ ಜಿಲ್ಲಾಧಿಕಾರಿಗಳಿಂದ ಮನವಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.11-**ಭಾರತದ ಚುನಾವಣಾ ಆಯೋಗವು ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ವೇಳಾಪಟ್ಟಿ ಪ್ರಕಟಿಸಿದ್ದು, ಜೂ. 20ರಿಂದ ಆರಂಭವಾಗಲಿದೆ. ಪಾರದರ್ಶಕ ಮತದಾರರ ಪಟ್ಟಿ ತಯಾರಿಕೆಗೆ ಸಾರ್ವಜನಿಕರು ಸಹಕರಿಸಬೇಕೆಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪಾಂಡ್ವೆ ರಾಹುಲ್ ಅವರು ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಪಾಂಡ್ವೆ ರಾಹುಲ್, ಈ ವೇಳಾಪಟ್ಟಿಯಂತೆ ನಮೂನೆ ಮುದ್ರಣ ಹಾಗೂ ತರಬೇತಿಯು ಜೂನ್ 20 ರಿಂದ ಜೂನ್ 29ರವರೆಗೆ ನಡೆಯಲಿದೆ. ಮನೆ ಮನೆ ಸಮೀಕ್ಷೆಯು ಜೂನ್ 30ರಿಂದ ಜುಲೈ 29ರವರೆಗೆ ನಡೆಯಲಿದೆ. ಕರಡು ಮತದಾರರ ಪಟ್ಟಿಯನ್ನು ಆಗಸ್ಟ್ 5 ರಂದು ಪ್ರಕಟಿಸಲಾಗುತ್ತದೆ ಎಂದು ಹೇಳಿದರು.

ಹಕ್ಕು ಮತ್ತು ಆಕ್ಷೇಪಣೆಯ ಅವಧಿಯನ್ನು ಆಗಸ್ಟ್ 5 ರಿಂದ ಸೆಪ್ಟೆಂಬರ್ 4ರವರೆಗೆ ನಿಗದಿಪಡಿಸಲಾಗಿದ್ದು, ಆಗಸ್ಟ್ 5 ರಿಂದ ಅಕ್ಟೋಬರ್ 3 ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಗಳನ್ನು ವಿಲೇವಾರಿ ಮಾಡಲಾಗುತ್ತದೆ. ಅಂತಿಮ ಮತದಾರರ ಪಟ್ಟಿಯನ್ನು ಬರುವ ಅಕ್ಟೋಬರ್ 7 ರಂದು ಪ್ರಕಟಿಸಲಾಗುತ್ತಿದ್ದು, ಎಸ್ ಐ ಆರ್ ಅರ್ಹತಾ ದಿನಾಂಕ ಬರುವ ಅಕ್ಟೋಬರ್ 1ರಂದು ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.



ಜಿಲ್ಲೆಯ ಶೋರಾಪುರ ತಾಲೂಕಿನಲ್ಲಿ 2,09,491 ಮತದಾರರ ಪೈಕಿ 1,97,852 ರಷ್ಟು ಮತದಾರರ (ಶೇ .94.44) ರಷ್ಟು ಮ್ಯಾಪಿಂಗ್ ಆಗಿದೆ. ಶಹಾಪುರ ತಾಲೂಕಿನಲ್ಲಿ 2,31,480 ಮತದಾರರ ಪೈಕಿ 2,20,935 ರಷ್ಟು( ಶೇ. 95.44) ರಷ್ಟು ಮ್ಯಾಪಿಂಗ್ ಆಗಿದೆ. ಯಾದಗಿರಿ 2,34,219 ಮತದಾರರ ಪೈಕಿ 2,28,849 ಮತದಾರರ ಮ್ಯಾಪಿಂಗ್ ಆಗಿದ್ದು, ಶೇ97.71 ರಷ್ಟು ಮ್ಯಾಪಿಂಗ್ ಆಗಿದೆ. ಗುರುಮಠಕಲ್ 1,34,832 ಮತದಾರರ ಪೈಕಿ 1,33,322 ರಷ್ಟು ಮತದಾರರ ಮ್ಯಾಪಿಂಗ್ ಆಗಿದೆ. ವಡಗೇರಾ,1,00,450 ಮತದಾರರ ಪೈಕಿ 98,340ರಷ್ಟು ಮತದಾರರ ಮ್ಯಾಪಿಂಗ್ ಆಗಿದ್ದು, ಶೇ 97.90 ರಷ್ಟು ಮ್ಯಾಪಿಂಗ್ ಆಗಿದೆ. ಹುಣಸಗಿ 1,43,024 ಮತದಾರರ ಪೈಕಿ 1,34,923 ಮತದಾರರ ಮ್ಯಾಪಿಂಗ್ ಆಗಿದ್ದು ಶೇ 94.34 ರಷ್ಟು ಮ್ಯಾಪಿಂಗ್ ಆಗಿದೆ. ಜಿಲ್ಲೆಯಲ್ಲಿ 2025ರನ್ವಯ ಒಟ್ಟು 10,53,496 ಮತದಾರರಿದ್ದು,ಈ ಪೈಕಿ ,10,14,221 ಮತದಾರರ ಮ್ಯಾಪಿಂಗ್ ಆಗಿದ್ದು,ಬಾಕಿ ಉಳಿದ ಮತದಾರರ ಮ್ಯಾಪಿಂಗ್ ಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ರಮೇಶ್ ಕೋಲಾರ್, ಸಹಾಯಕ ಆಯುಕ್ತ ಶ್ರೀಧ್‌ರ ಗೋಟುರ್ ಅವರು ಉಪಸ್ಥಿತರಿದ್ದರು.

# ಚುಕ್ಕಿ ಪ್ರತಿಷ್ಠಾನದ ಸುವರ್ಣ ಸಂಭ್ರಮ: ಸಿರವಾರದಲ್ಲಿ ಸಡಗರದ ಬಸವತ್ವ ಚಿಂತನ ಗೋಷ್ಠಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಸಿರವಾರ, ಜೂ.11-**ಪಟ್ಟಣದ ಚುಕ್ಕಿ ಪ್ರತಿಷ್ಠಾನದ ವತಿಯಿಂದ ಲಿಂ. ಚುಕ್ಕಿ ಉಮಾಪತಪ್ಪ ಅವರ 50ನೇ ವರ್ಷದ ಪುಣ್ಯಸ್ಮರಣೆ ಹಾಗೂ 'ಬಸವತ್ವ ಚಿಂತನ ಗೋಷ್ಠಿ' ಅಂಗವಾಗಿ ಹಮ್ಮಿಕೊಂಡಿದ್ದ ಸುವರ್ಣ ಸಂಭ್ರಮ ಕಾರ್ಯಕ್ರಮ ಗುರುವಾರ ಅತ್ಯಂತ ವಿಜೃಂಭಣೆಯಿಂದ ನಡೆಯಿತು.


**ಮೆರವಣಿಗೆಯ ಸಂಭ್ರಮ:**ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ ಶ್ರೀ ಬಸವಾದಿ ಶರಣರ ಪೂಜೆ ನೆರವೇರಿಸಲಾಯಿತು. ನಂತರ, ಈಶ್ವರ ದೇವಸ್ಥಾನದಿಂದ ರುದ್ರಮ್ಮ ಉಮಾಪತಪ್ಪ ಕಲ್ಯಾಣ ಮಂಟಪದವರೆಗೆ ಬಸವಣ್ಣನವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಿತು. ಈ ಸಂದರ್ಭದಲ್ಲಿ ದಾವಣಗೆರೆಯ ಬಸವ ಕಲಾ ಬಳಗದ ತಂಡವು ಪ್ರಸ್ತುತಪಡಿಸಿದ ವಚನ ಭಜನೆ ಮೆರವಣಿಗೆಗೆ ವಿಶೇಷ ಮೆರಗು ನೀಡಿತು.

**ವಿಚಾರಗೋಷ್ಠಿ:** ಕಾರ್ಯಕ್ರಮದಲ್ಲಿ ಷಟಸ್ಥಲ ಧ್ವಜಾರೋಹಣ ಮತ್ತು ಶರಣಪ್ಪ ಗೋನಾಳ ತಂಡದವರಿಂದ ವಚನ ಗಾಯನ ಕಾರ್ಯಕ್ರಮಗಳು ಜರುಗಿದವು. ಬೆಳಿಗ್ಗೆ 10:30ಕ್ಕೆ ಆರಂಭವಾದ ವಿಷಪೂರಿತ ಸನ್ನಿವೇಶದಲ್ಲಿ ಬಸವತ್ವದ ಅವಶ್ಯಕತೆ ಕುರಿತಾದ ಚಿಂತನ ಗೋಷ್ಠಿಯಲ್ಲಿ ಅನೇಕ ಚಿಂತಕರು ಪಾಲ್ಗೊಂಡು ವಿಚಾರ ಮಂಡಿಸಿದರು.



**ಗಣ್ಯರ ಉಪಸ್ಥಿತಿ:**ಮಾಜಿ ಸಚಿವ ಎನ್.ಎಸ್. ಬೋಸರಾಜು ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಆಳಂದದ ಪೂಜ್ಯ ವಿಶ್ವನಾಥ ಕೋರಣೇಶ್ವರ ಸ್ವಾಮಿಗಳು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮಾನ್ವಿ ಶಾಸಕ ಜಿ. ಹಂಪಯ್ಯನಾಯಕ, ಡಾ. ಜೆ.ಎಸ್. ಪಾಟೀಲ್, ಜ್ಯೋತಿ ಅಕ್ಕ ಸೇರಿದಂತೆ ನಾಡಿನ ಅನೇಕ ಗಣ್ಯರು ಹಾಗೂ ಸಾವಿರಾರು ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಂಭ್ರಮಿಸಿದರು.

# ಒಂದೇ ದಿನದಲ್ಲಿ ಹೊಸ ಕಂಬ ವೈರ್ ಟಿಸಿ ಅಳವಡಿಸಿದ ದಣಿವರಿಯದ ಕಾರ್ಮಿಕರಿಗೆ ಸನ್ಮಾನಿಸಿ ಗೌರವಿಸಿದ ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ್ !



■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.11-**ನಗದರದ ವಾರ್ಡ ನಂ. 02.ನಲ್ಲಿ ಅನಮೂನ್ ಕಾಲೋನಿಯಲ್ಲಿ ಕಳೆದ ವರ್ಷಗಳಿಂದ ವಿದ್ಯುತ್ ಸಮಸ್ಯೆ ವಿಪರೀತವಾದ ಹಿನ್ನಲೆಯಲ್ಲಿ ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ್ ಅವರಿಗೆ ಅನಮೂನ್ ಕಾಲೋನಿ ನಿವಾಸಿಗಳು ಸ್ಥಳಕ್ಕೆ ಕರೆಸಿ ವಿದ್ಯುತ್ ಸಮಸ್ಯೆ ಬಗ್ಗೆ ಚರ್ಚಸಿದ ನಂತರ

ಧೀಡಿರಾಗಿ ಸ್ಥಳದಲ್ಲೇ ವಿನೂತನವಾಗಿ ಪ್ರತಿಭಟನೆ ಮಾಡಿದ ಹಿನ್ನಲೆಯಲ್ಲಿ ಸ್ಪಂದಿಸಿದ ಜೇಸ್ಕಂ ಇಲಾಖೆ ಅಧಿಕಾರಿಗಳು ಅನಮೂನ್ ಕಾಲೋನಿಗೆ ಶಾಶ್ವತ ವಿದ್ಯುತ್ ಸಮಸ್ಯೆ ಪರಿಹಾರಕ್ಕಾಗಿ ಹೊಸ ವೈರು ಕಂಬ

ಟಿಸಿ (ಟ್ರ್ಯಾನ್ಸ್ಫಾರ್ಮರ್) ಅಳವಡಿಸಿ ನಿವಾಸಿಗಳಿಗೆ ಇನ್ನು ಮುಂದೆ ವಿದ್ಯುತ್ ಸಮಸ್ಯೆ ಆಗದಂತೆ ಅನೂಕೂಲ ಮಾಡಿ ಕೊಟ್ಟ ಜೇಸ್ಕಂ ಇಲಾಖೆ ಅಧಿಕಾರಿ ಸಿಬ್ಬಂದಿಗಳಿಗೆ ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ ಅವರು ಮತ್ತು ನಿವಾಸಿಗಳು ಧನ್ಯವಾದ ತಿಳಿಸಿದ್ದಾರೆ.

ಕಾಮಗಾರಿ ಮುಗಿದ ನಂತರ ಕಾರ್ಮಿಕ ಕಾರ್ಯಕ್ಕೆ ಮೆಚ್ಚಿ ಬೆಳ್ಳಗೆ ಯಿಂದ ಸಂಜೆ ವರೆಗೆ ಹೊಸ ಕಂಬ ವೈರ್ ಟಿಸಿ ಅವಳಡಿಸಿದ

ದಣಿವರಿಯದ ಕಾರ್ಮಿಕರಿಗೆ ಸ್ಥಳದಲ್ಲೇ ಸಾಮಾಜಿಕ ಹೋರಾಗಾರ ಉಮೇಶ ಕೆ. ಮುದ್ನಾಳ ಅವರು ಶಾಲುಹೊದಿಸಿ ಸನ್ಮಾನಿಸಿ ಗೌರವಿಸಲಾಯಿತು.

ಇದೇ ಸಂಧರ್ಬದಲ್ಲಿ ಮುಕ್ತಾರ್ ಪಟೇಲ್, ಅಹ್ಮದ್ ಅಲಿ, ಸಯ್ಯದ್ ಕಲೀಂ, ಶಾನವಾಜ್ ಇಮ್ರಾನ್, ಅಕ್ಬರ್ ಮುಸ್ತಫಾ ಭಾಯಿ, ಇಮ್ರಾನ್ ಸಾಬ್, ಸಾದಿಕ್ ಸಾರ್ಗ, ಫಯಾಜ್ ರಶೀದ್, ಯಾಸಿನ್ ಸಾಬ್, ರಫೀಕ್ ಪಟೇಲ್, ದೇವ್ ರಾಜು ಚಂದ್ರು, ರಾಜು, ಶ್ರೀಕಾಂತ್, ವಸುದೇವ ಗೋರಪ್ಪ, ದುರ್ಗಪ್ಪ ಮಲ್ಲಪ್ಪ ಸೇರಿದಂತೆ ಅನೇಕು ಇದ್ದರು.

# ಶರಣು ಹುಣಸಗಿ ಬಂಧಿಸಿ ಗಡಿಪಾರು ಮಾಡುವಂತೆ ಡಿವೈಎಫ್‌ಐ-ಎಸ್‌ಎಫ್‌ಐ ನೇತೃತ್ವದಲ್ಲಿ ದಿಢೀರನೆ ಪ್ರತಿಭಟನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಜಾಲಹಳ್ಳಿ, ಜೂ.11-**ವಿದ್ಯಾರ್ಥಿಗಳ ಪಾಲಕರಿಗೆ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ, ಜೀವ ಬೆದರಿಕೆ ಹಾಕಿ, ಹಲ್ಲೆಗೆ ಮುಂದಾದ ಘಟನೆ ಗುರುವಾರ ನಡೆದಿದೆ,

ಶ್ರೀ ಭಾಗ್ಯವಂತಿ ಖಾಸಗಿ ಶಾಲೆಯ ಕಾರ್ಯದರ್ಶಿ ಶರಣು ಹುಣಸಗಿ ಅವರನ್ನು ತಕ್ಷಣ ಬಂಧಿಸಿ, ಜಾಲಹಳ್ಳಿ ಪ್ರದೇಶದಿಂದ ಗಡಿಪಾರು ಮಾಡಬೇಕೆಂದು ಆಗ್ರಹಿಸಿ ಡಿವೈಎಫ್‌ಐ ಹಾಗೂ ಎಸ್‌ಎಫ್‌ಐ ಸಂಘಟನೆಗಳ ನೇತೃತ್ವದಲ್ಲಿ ಅಂಬೇಡ್ಕರ್ ವೃತ್ತದ ಬಳಿ ಪ್ರತಿಭಟನೆ ನಡೆಸಿದ್ದಾರೆ,

ಶರಣು ಹುಣಸಗಿ ವಿರುದ್ಧ ಈ ಹಿಂದೆ ಶಿಕ್ಷಣ ಇಲಾಖೆಯ ಬಿಇಒ ಅವರ ಮೇಲೆ ಹಲ್ಲೆ ನಡೆಸಿದ ಪ್ರಕರಣ ಸೇರಿದಂತೆ ರೌಡಿಶೀಟರ್ ಹಾಗೂ ಜಾತಿ ನಿಂದನೆ ಪ್ರಕರಣಗಳು ದಾಖಲಾಗಿವೆ ಎಂದು ಸಂಘಟನಾಕಾರು ಆರೋಪಿಸಿದರು.


ಇಂತಹ ಹಿನ್ನೆಲೆಯ ವ್ಯಕ್ತಿಯಿಂದ ವಿದ್ಯಾರ್ಥಿಗಳ ಪಾಲಕರಿಗೆ ಬೆದರಿಕೆ ಹಾಕಿರುವುದು ಖಂಡನೀಯವಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.




ವಿದ್ಯಾರ್ಥಿಗಳ ಶಿಕ್ಷಣದ ವಾತಾವರಣವನ್ನು ಕದಡುವಂತಹ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಬೇಕು. ಜೊತೆಗೆ ಆರೋಪಿಯನ್ನು ತಕ್ಷಣ ಬಂಧಿಸಿ, ಕಾನೂನು ಕ್ರಮ ಜರುಗಿಸಿ ಗಡಿಪಾರು ಮಾಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಇದೆ ಸಂದರ್ಭದಲ್ಲಿ ಶಬ್ಬೀರ್ ಜಾಲಹಳ್ಳಿ. ಮೌನೇಶ ಜಾಲಹಳ್ಳಿ. ದಲಿತ ಹಿರಿಯ ಮುಖಂಡ ಸಾಬಣ್ಣ ಕಮಲದಿನ್ನಿ, ಮುಕ್ತಂ ಪಾಷಾ, ರಾಜು ನಾಯಕ, ಗುರು ತೋಟದ್, ರಂಗನಾಥ ಟೈರ್ಲ, ಲೋಹಿತ್, ಬಸವರಾಜ ವಂದಲಿ, ಮೌನೇಶ ಚಪ್ಪಳಿಕಿ, ರಂಗನಾಥ ಬುಂಕಲದೊಡ್ಡಿ, ಮೈಬಬೂ, ರಿಯಾಜ್, ಮೌನೇಶ ಯಲ್ಲಗಟ್ಟಿ, ದುರುಗಪ್ಪ, ಮಲ್ಲು ಗೌಡರು, ಶಿವಮಾನ್ಯಪ್ಪ, ರಂಗನಾಥ ಕುದುರಿ, ಹನುಮಂತ ಮಡಿವಾಳ, ರಿಯಾಜ್ ಆರ್ಥಿ, ರಂಗನಾಥ ಟೈರ್ಲ, ಕರಿಲಿಂಗಪ್ಪ ಟೈರ್ಲ, ಆರ್ ಪ್ರಿನ್ಸ್, ಟೈರ್ಲ, ಮತ್ತು ಇತರರು ಭಾಗವಹಿಸಿದ್ದರು

# ನೂತನ ಸಚಿವ ಡಾ.ಯತಿಂದ್ರ ರವರನ್ನು ಪೂಜ್ಯ ಶ್ರೀ ಕೆಂಚರಾಯ ಮುತ್ಯಾ ಸನ್ಮಾನಿಸಿದರು



■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.11-**ರಾಜ್ಯದ ನೂತನ ನಗರಾಭಿವೃದ್ಧಿ ಸಚಿವರಾಗಿ ನೇಮಕವಾದ ಡಾ.ಯತೀಂದ್ರ ಸಿದ್ದರಾಮಯ್ಯ ರವರನ್ನು ಜಿಲ್ಲೆಯ ಕೆಂಭಾವಿ ಸಮಿಪ ಇರುವ ಸುಕ್ಷೇತ್ರ ಮಾಲಹಳ್ಳಿ ಗ್ರಾಮದ ಶ್ರೀ ಮಾಳಿಂಗರಾಯ ದೇವಸ್ಥಾನದ ಪರಮ ಪೂಜ್ಯ ಶ್ರೀ ಕೆಂಚರಾಯ ಮುತ್ಯಾ ರವರು ಬೆಂಗಳೂರಿನ ಅವರ ನಿವಾಸದಲ್ಲಿ ಶುಭ ಕೋರಿ ಸನ್ಮಾನಿಸಿ ಆಶೀರ್ವದಿಸಿ ಮಾತನಾಡಿದರು.

ಎರಡನೇ ಅವಧಿಯ ಸಂಪುಟ ಪುನರಚೇನೆಯಲ್ಲಿ ಹೈಕಮಾಂಡ್-ತಮ್ಮ ಸೇವೆಯನ್ನು ಪರಿಗಣಿಸಿ ತಮಗೆ ಸಚಿವ ಸ್ಥಾನ ನೀಡಿದ್ದು

ಅತ್ಯಂತ ಸಂತಸದ ವಿಷಯ ಮುಂದಿನ ದಿನಗಳಲ್ಲಿ ತಮಗೆ ರಾಜಕೀಯದಲ್ಲಿ ಉಜ್ವಲ ಭವಿಷ್ಯವಿದೆ ತಮ್ಮ ತಂದೆಯವರಂತೆ ತಾವು ಕೂಡಾ ಜನಪರ ಸಮಾಜಮುಖಿ ಕೆಲಸ ಮಾಡುವ ಮೂಲಕ ಅವರ ಕೀರ್ತಿಯನ್ನು ಹೆಚ್ಚಿಸಬೇಕಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕುರುಬ ಸಂಘದ ಸುರಪುರ ತಾಲೂಕ ಅಧ್ಯಕ್ಷ ಕಾಳಪ್ಪ ಕವತಿ, ಶಶಿಕುಮಾರ್,ಬೆಂಗಳೂರು, ಬಸನಗೌಡ ಬಪ್ಪರಗಿ, ಮಾಳಿಂಗರಾಯ ಕಂದಳ್ಳಿ, ಬೀರಪ್ಪ ಮಾಲಹಳ್ಳಿ, ಹಾಗೂ ಇನ್ನಿತರರು ಉಪಸ್ಥಿತರಿದ್ದರು

# ಕರ್ನಾಟಕ ರಕ್ಷಣಾ ವೇದಿಕೆ ಹೋರಾಟಕ್ಕೆ ಫಲ ಗೋಳಸಂಗಿ ಗ್ರಾಮದಲ್ಲಿ ಪಡಿತರ ಚೀಟಿ ವಿತರಣೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಗೋಳಸಂಗಿ, ಜೂ.11-**ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣ ಗೌಡ ಬಣ) ವತಿಯಿಂದ ನಡೆಸಿದ ಹೋರಾಟ ಹಾಗೂ ಅಧಿಕಾರಿಗಳಿಗೆ ಸಲ್ಲಿಸಿದ್ದ ಮನವಿಗೆ ಸ್ಪಂದಿಸಿ ಇಂದು ಬೆಳಗ್ಗೆ ಗೋಳಸಂಗಿ ಗ್ರಾಮದಲ್ಲಿ ಅರ್ಹ ಫಲಾನುಭವಿಗಳಿಗೆ ಪಡಿತರ ಚೀಟಿ ವಿತರಣೆ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ಕೆಲವು ದಿನಗಳ ಹಿಂದೆ ಗೋಳಸಂಗಿ ಗ್ರಾಮದಲ್ಲಿ ಪಡಿತರ ಚೀಟಿ ವಿತರಣೆಯಲ್ಲಿ ಉಂಟಾಗಿದ್ದ ವಿಳಂಬವನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ನಿಡಗುಂದಿ ತಹಶೀಲ್ದಾರರಿಗೆ ಮನವಿ ಸಲ್ಲಿಸಲಾಗಿತ್ತು. ಸಾರ್ವಜನಿಕರ ಸಮಸ್ಯೆಗೆ ತಕ್ಷಣ ಸ್ಪಂದಿಸಿದ ತಹಶೀಲ್ದಾರರು ಸಂಬಂಧಿಸಿದ ಅಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದರು.



ಅದರಂತೆ ಆಹಾರ ಇಲಾಖೆಯ ನಿರೀಕ್ಷಕರು ಹಾಗೂ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ, ಗೋಳಸಂಗಿ ಸಂಸ್ಥೆಯ ವ್ಯವಸ್ಥಾಪಕರಾದ ರಾಘವೇಂದ್ರ ಸ್ವಾಮಿ ದೇವಾಂಗಮಠ ಅವರ ಉಪಸ್ಥಿತಿಯಲ್ಲಿ ಹಾಗೂ ಕರ್ನಾಟಕ ರಕ್ಷಣಾ ವೇದಿಕೆ ಪದಾಧಿಕಾರಿಗಳ ಸಮ್ಮುಖದಲ್ಲಿ ಇಂದು ಪಡಿತರ ಚೀಟಿ ವಿತರಣೆ ಮಾಡಲಾಯಿತು.


ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಗೋಳಸಂಗಿ ಗ್ರಾಮ ಘಟಕದ ಅಧ್ಯಕ್ಷ ಸಿಂಧೂರ ಚಲವಾದಿ, ಯುವ ನಾಯಕ ಇಮ್ತಿಯಾಜ್ ಹೆಬ್ಬಾಳ, ದಸ್ತಗೀರ್ ಸರ್ಕುಲಿ, ಹುಸನಪ್ಪ ಭಜಂತ್ರಿ, ಡೊಂಗ್ರಿಸಾಬ್ ಹತ್ತರಕಿಹಾಳ, ಮೌಲಾಲಿ ಹತ್ತರಕಿಹಾಳ, ಅನ್ವರ್ ಹಡಗಿನಾಳ, ಮುದುಕಪ್ಪ ಬಾಗೇವಾಡಿ ಸೇರಿದಂತೆ ಹಲವಾರು ಕರವೇ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು. ಈ ಕುರಿತು ಮಾತನಾಡಿದ ಕರವೇ ಮುಖಂಡರು, ಸಾರ್ವಜನಿಕರ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಕರ್ನಾಟಕ ರಕ್ಷಣಾ ವೇದಿಕೆ ಸದಾ ಜನರ ಪರವಾಗಿ ಹೋರಾಟ ನಡೆಸುತ್ತಿದ್ದು, ಅಧಿಕಾರಿಗಳು ಜನಸಾಮಾನ್ಯರ ಅಹವಾಲುಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಹೇಳಿದರು.

ಇದೇ ವೇಳೆ, ಕೆಲವು ದಿನಗಳ ಹಿಂದೆ ಹೊನ್ನ ನುಡಿ ಕನ್ನಡ ದಿನಪತ್ರಿಕೆಯಲ್ಲಿ ಪಡಿತರ ಚೀಟಿ ವಿತರಣೆಯ ವಿಳಂಬದ ಕುರಿತು ಸುದ್ದಿ ಪ್ರಕಟವಾಗಿತ್ತು. ಆ ವರದಿಯನ್ನು ಗಮನಿಸಿದ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಇಂದು ಪಡಿತರ ಚೀಟಿ ವಿತರಣೆ ನಡೆಸಿರುವುದು ಸಾರ್ವಜನಿಕರಿಂದ ಪ್ರಶಂಸೆಗೆ ಪಾತ್ರವಾಗಿದೆ. ಜನರ ಸಮಸ್ಯೆಗೆ ಸ್ಪಂದಿಸಿ ಶೀಘ್ರ ಕ್ರಮ ಕೈಗೊಂಡ ತಹಶೀಲ್ದಾರರು, ಆಹಾರ ಇಲಾಖೆ ಅಧಿಕಾರಿಗಳು ಹಾಗೂ ಸಹಕಾರಿ ಸಂಘದ ವ್ಯವಸ್ಥಾಪಕರ ಕಾರ್ಯವನ್ನು ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಆಗುಂಬೆ ಘಾಟಿಯಲ್ಲಿ ಜೂನ್ 15ರಿಂದ ಭಾರಿ ವಾಹನಗಳ ಸಂಚಾರ ನಿಷೇಧ

■ ಕನ್ನಡ ಮಾತೃ ಭೂಮಿ ವಾರ್ತೆ

**ಶಿವಮೊಗ್ಗ,ಜೂ.11-**ರಾಷ್ಟ್ರೀಯ ಹೆದ್ದಾರಿ 169ಎ ಆಗುಂಬೆ ಘಾಟಿಯಲ್ಲಿ ಭಾರಿ ವಾಹನಗಳ (ಜಲ್ಲಿ ಮತ್ತು ಸರಕು ತುಂಬಿದ ವಾಹನಗಳು) ಸಂಚಾರವನ್ನು ಜೂನ್ 15ರಿಂದ ಮಳೆಗಾಲ ಮುಗಿಯುವವರೆಗೂ ನಿಷೇಧಿಸಿರುವ ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ಅವರು ಪರ್ಯಾಯ ಮಾರ್ಗದಲ್ಲಿ ಸಂಚರಿಸುವಂತೆ ಆದೇಶಿಸಿದ್ದಾರೆ.ಶಿವಮೊಗ್ಗದಿಂದ ಹೊಸನಗರ-ಮಾಸ್ತಿಕಟ್ಟೆ ಮಾರ್ಗವಾಗಿ ಕುಂದಾಪುರ ಮತ್ತು ಉಡುಪಿಗೆ ಸಂಪರ್ಕ ಕಲ್ಪಿಸುವ ಹುಲಿಕಲ್ ಘಾಟಿಯಲ್ಲಿ ಭೂಕುಸಿತ ಸಂಭವಿಸಿದ ನಂತರ ತಾತ್ಕಾಲಿಕ ರಕ್ಷಣಾತ್ಮಕ ಕಾಮಗಾರಿ ನಡೆಯುತ್ತಿದೆ.



ಅದು ಪೂರ್ಣಗೊಳ್ಳದೇ ಇರುವುದ ರಿಂದ ರಾಷ್ಟ್ರೀಯ ಹೆದ್ದಾರಿ 169ಎ ತೀರ್ಥಹಳ್ಳಿ-ಮಲ್ಪೆ-ಉಡುಪಿ ರಸ್ತೆಯ ಆಗುಂಬೆ ಘಾಟಿಯಲ್ಲಿ ಭಾರಿ ವಾಹನಗಳ ಹೆಚ್ಚಿನ ಓಡಾಟವಿದೆ. ಮುಂದಿನ ದಿನಗಳಲ್ಲಿ ಯೂ ಇದು ಮುಂದುವರೆದಲ್ಲಿ ಅಲ್ಲಲ್ಲಿ ರಸ್ತೆಯ ಬದಿ ಭೂಕುಸಿತ,

ಅಘಘಾತ ಆಗುವ ಮತ್ತು ಸಾರ್ವಜನಿ ಕರ ಓಡಾಟಕ್ಕೆ ತೊಂದರೆಯಾಗುವ ಸಂಭವವಿದೆ.

ಅಲ್ಲದೆ, ಆರೋಗ್ಯ ಸಮಸ್ಯೆ ಹಿನ್ನೆಲೆಯಲ್ಲಿ ಮಣಿಪಾಲ್, ಉಡುಪಿ, ಮಂಗಳೂರಿಗೆ ಹೋಗುವ ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ ಮತ್ತು ಹಾವೇರಿ ಜಿಲ್ಲೆಯ ನಾಗರಿಕರಿಗೆ ಇರುವ ಸಂಪರ್ಕ ಬಂದ್ ಆದರೆ ನಾಲ್ಕು ಜಿಲ್ಲೆಯ ಜನರಿಗೆ ತುಂಬಾ ತೊಂದರೆ ಯಾಗಲಿದ್ದು ಈ ಆದೇಶ ಹೊರಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಪರ್ಯಾಯ ಮಾರ್ಗ: ತೀರ್ಥಹಳ್ಳಿ-ಉಡುಪಿಗೆ ತೆರಳುವ ಭಾರಿ ವಾಹನಗಳು ತೀರ್ಥಹಳ್ಳಿ-ನಗರ-ನಾಗೋಡಿ-ಕೊಲ್ಲೂರು-ಕುಂದಾಪುರ-ಉಡುಪಿ ಮತ್ತು ತೀಥ 'ರ್ಹಳ್ಳಿ-ಶೃಂಗೇರಿ-ಕೆರೆಕಟ್ಟೆ-ಬಜಗೋಳಿ-ಕಾರ್ಕಳ-ಉಡು ಪಿ ಮಾರ್ಗವಾಗಿ ಸಂಚರಿಸಬೇಕು.

ಉಡುಪಿ-ತೀರ್ಥಹಳ್ಳಿ ಕಡೆಗೆ ಹೋಗುವ ಭಾರಿ ವಾಹನಗಳು ಉಡು ಪಿ-ಕ ಂದಾಪುರ-ಕೊಲ್ಲೂರು-ನಾಗೋಡಿ-ನಗರ-ತೀರ್ಥಹ ಳ್ಳಿ ಮತ್ತು ಕಾರ್ಕಳ-ಬ ಜಗೋಳಿ-ಕೆರೆಕಟ್ಟೆ-ಶೃಂಗೇರಿ- ತೀರ್ಥಹಳ್ಳಿ ಮಾರ್ಗವಾಗಿ ಸಂಚರಿಸುವಂತೆ ಆದೇಶದಲ್ಲಿ ಸೂಚಿಸಲಾಗಿದೆ.

## ...ಮೊದಲನೇ ಪುಟದಿಂದ

## ಪಶ್ಚಿಮ ಬಂಗಾಳದಲ್ಲಿ ಅರ್ಹರನ್ನು ಮತದಾರ ಪಟ್ಟಿಯಿಂದ ತೆಗೆದು ಹಾಕಿದ ಅನಾಹುತ

ಲಕ್ಷ ಮತದಾರರನ್ನು ಚುನಾವಣೆಯಿಂದ ಹೊರಗಿಡಲಾಯಿತು. ಆ 98 ಲಕ್ಷ ಮತದಾರರ ಪೈಕಿ ಶೇ.80ರಷ್ಟು ಮತದಾರರ ಟಿಎಂಸಿ ಮತ್ತು ಕಾಂಗ್ರೆಸ್ ಪರವಾಗಿದ್ದರು ಎಂಬವುದು ತಿಳಿದುಬಂದಿದ್ದು, ವಿರೋಧ ಪಕ್ಷಕ್ಕೆ ಬೆಂಬಲಿಸುವ ಮತದಾರರನ್ನು ಪಟ್ಟಿಯಿಂದ ತೆಗೆದು ಹಾಕುವ ಹುನ್ನಾರವನ್ನು ಮಾಡುವ ಮೂಲಕ ಪಶ್ಚಿಮ ಬಂಗಾಳ ಚುನಾವನೆಯನ್ನು ಬಿಜೆಪಿ ಗೆದ್ದಿದೆ ಎಂದು ಆರೋಪಿಸಿದರು. ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಬಸವರಾಜ ಪಾಟೀಲ್ ಇಟಗಿ, ಪ್ರಮುಖರಾದ ಮಹ್ಮದ್ ಶಾಲಂ, ಕೆ.ಶಾಂತಪ್ಪ, ರಾಮಣ್ಣ ಇರಬಗೇರಾ, ಅಸ್ಲಂ ಪಾಷಾ, ಶ್ರೀದೇವಿ ನಾಯಕ, ಮಲ್ಲಿಕಾರ್ಜುನ ಯದ್ದಲದೊಡ್ಡಿ ತರಬೇತುದಾರ ಜಾಗೃತ ಕರ್ನಾಟಕದ ರಾಜ್ಯ ಸಂಚಾಲಕ ಮುತ್ತುರಾಜ ಸೇರಿದಂತೆ ಅನೇಕರಿದ್ದರು.

## ಬೆಚ್ಚಿ ಬಿದ್ದ ಅಧಿಕಾರಿಗಳು, ಲೋಪ ಕಂಡುಬಂದರೆ ಕ್ರಮ-ಪೂವಿತಾ

ಜರುಗಿಸುವುದಾಗಿ ಖಡಕ್ ಎಚ್ಚರಿಕೆ ನೀಡಿದರು. ತಾಲ್ಲೂಕು ಆಸ್ಪತ್ರೆಯನ್ನು ಭೇಟಿ ನೀಡಿ ರೋಗಿಗಳಿಗೆ ಒದಗಿಸಲಾಗುತ್ತಿರುವ ಆರೋಗ್ಯ ಸೇವೆಗಳು, ವೈದ್ಯಕೀಯ ಸೌಲಭ್ಯಗಳು, ಔಷಧಿಗಳ ಲಭ್ಯತೆ ಹಾಗೂ ಆಸ್ಪತ್ರೆಯ ಸ್ವಚ್ಛತಾ ವ್ಯವಸ್ಥೆಯನ್ನು ಪರಿಶೀಲಿಸಿದರು. ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಸಮಯಕ್ಕೆ ಸರಿಯಾಗಿ ಒದಗಿಸಲು ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ನಂತರ ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿ ಆಹಾರದ ಗುಣಮಟ್ಟ, ಸ್ವಚ್ಛತೆ, ಫಲಾನುಭವಿಗಳಿಗೆ ನೀಡಲಾಗುತ್ತಿರುವ ಸೇವೆಗಳ ಕುರಿತು ಪರಿಶೀಲನೆ ನಡೆಸಿದರು. ಸಾರ್ವಜನಿಕರಿಗೆ ಉತ್ತಮ ಗುಣಮಟ್ಟದ ಆಹಾರವನ್ನು ನಿಯಮಾನುಸಾರ ಒದಗಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರಸಗೊಬ್ಬರ ಅಂಗಡಿಗಳ ಪರಿಶೀಲನೆ ವೇಳೆ ರೈತರಿಗೆ ಅಗತ್ಯ ಪ್ರಮಾಣದಲ್ಲಿ ರಸಗೊಬ್ಬರಗಳ ಲಭ್ಯತೆ, ದಾಸ್ತಾನು ಸ್ಥಿತಿ ಹಾಗೂ ಮಾರಾಟ ವ್ಯವಸ್ಥೆಯ ಕುರಿತು ಮಾಹಿತಿ ಪಡೆದು, ಯಾವುದೇ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಅಲ್ಲದೆ, ತುರ್ವಿಹಾಳ ಕೆರೆಗೆ ಭೇಟಿ ನೀಡಿ ಕೆರೆಯ ಅಭಿವೃದ್ಧಿ, ನೀರಿನ ಸಂಗ್ರಹಣೆ ಹಾಗೂ ನಿರ್ವಹಣಾ ಕ್ರಮಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು ಮತ್ತು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶಿಸಿದರು.

ನಂತರ ಬಳಿಕ ನಗರಸಭೆ ಕಂದಾಯ ಇಲಾಖೆ ಸೇರಿದಂತೆ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ವಿವಿಧ ಇಲಾಖೆಗಳ ಪ್ರಗತಿ, ಸಾರ್ವಜನಿಕ ಸಮಸ್ಯೆಗಳ ಪರಿಹಾರ, ಸರ್ಕಾರದ ಯೋಜನೆಗಳ ಅನುಷ್ಠಾನ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿದರು. ಜನಸಾಮಾನ್ಯರಿಗೆ ಪರಿಣಾಮಕಾರಿ ಹಾಗೂ ಪಾರದರ್ಶಕ ಆಡಳಿತ ಸೇವೆಗಳನ್ನು ಒದಗಿಸಲು ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಲಿಂಗಸೂಗುರು ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲ್ ಶೆಟ್ಟಿ, ನಗರಸಭೆ ಪೌರಾಯುಕ್ತ ಪಾಂಡುರಂಗ ಇಟಗಿ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

## ಅದಿತಿ ಆಸ್ಪತ್ರೆಯಲ್ಲಿ ತಜ್ಞ ವೈದ್ಯರಿಲ್ಲದೇ ಟೆಕ್ನಿಷಿಯನ್ ನಿಂದ ವರದಿ : ಕ್ರಮಕ್ಕೆ ಅಬ್ದುಲ್ ಶಾಲಂ ಆಗ್ರಹ

ರೇಡಿಯೋಲಾಜಿಷ್ಟ ಸೇರಿದಂತೆ ಯಾವುದೇ ವೈದ್ಯರಿಲ್ಲ. ಟೆಕ್ನಿಷಿಯನ್ ಇವರು ಪರೀಕ್ಷೆ ಮಾಡಿ ವರದಿ ನಿಡುತ್ತಿದ್ದಾರೆ. ಈ ಕುರಿತು ತಾಲೂಕ ಆರೋಗ್ಯಾಧಿಕಾರಿಗಳಿಗೆ ದೂರು ನೀಡಲಾಗಿದೆ. ಆರ್‌ಟಿಐ ಅಡಿ ಮಾಹಿತಿ ಪಡೆದಿದ್ದು ಅತಿಥಿ ಆಸ್ಪತ್ರೆಯಲ್ಲಿ ತಜ್ಞ ವೈದ್ಯರೇ ಇಲ್ಲದೇ ಇರುವದು ಸ್ಪಷ್ಟವಾಗಿದೆ. ತಪ್ಪು ಪರೀಕ್ಷಾ ವರದಿ ನೀಡಲಾಗುತ್ತಿದೆ. ಆರು ತಿಂಗಳ ಆರ್‌ಟಿಐ ಅಡಿ ಅರ್ಜಿಗೆ ಉತ್ತರ ನೀಡಿದ್ದು 2026 ರಲ್ಲಿ ನವೀಕರಣಗೊಳಿಸಿದ ಮಾಹಿತಿ ನೀಡಲಾಗಿದೆ. ಹಿಂದಿನ ವರ್ಷದಲ್ಲಿ ತಜ್ಞ ವೈದ್ಯರು ಇಲ್ಲದೇ ಇರುವದುಸ್ಪಷ್ಟವಾಗಿದೆ. ಸಾರ್ವಜನಿಕರಿಂದ ಪರೀಕ್ಷೆ, ಚಿಕಿತ್ಸೆ ಹೆಸರಿನಲ್ಲಿ ಹಣವಸೂಲಿ ಮಾಡುತ್ತಿದ್ದು ಯಾವುದಾದರೂ ಅನಾಹುತ ಸಂಭವಿಸಿದರೆ ಹೊಣೆಯಾರು ಎಂದು ಪ್ರಶ್ನಿಸಿದರು. ಕೂಡಲೇ ಜಿಲ್ಲಾ ಆರೋಗ್ಯ ಆಧಿಕಾರಿಗಳು ತನಿಖೆ ಆಸ್ಪತ್ರೆಯ ವಿರುದ್ಧ ಕ್ರಮ ಕೈಗೊಳ್ಳಬೇಕು. ಇಲ್ಲದೇ ಹೋದರೆಲೋಕಾಯುಕ್ತರು ಸೇರಿದಂತೆ ಕಾನೂನಾತ್ಮಕ ಹೋರಾಟ ಮಾಡುವದಾಗಿ ಹೇಳಿದರು.

ಮಂಗಳವಾರಪೇಟೆ ನಿವಾಸಿ ಉಮೇಶ ಮಾತನಾಡಿ ಐವಿಎಫ್ ಮಾಡುವದಾಗಿ ಎರಡುವರೆ ಲಕ್ಷ ರೂ ಹಣ ಪಡೆಯಲಾಗಿದೆ. ಆದರೂ ಮಕ್ಕಳಾಗಿಲ್ಲ.ಇದೇ ರೀತಿ ಅನೇಕ ಜನರಿಂದ ಹಣ ವಸೂಲಿ ಮಾಡಲಾಗಿದೆ. ಮಕ್ಕಳಾಗದೇ ಇರುವವರ ಹಣವಸೂಲಿ ಮಾಡಿ ಮೋಸ ಮಾಡಲಾಗುತ್ತಿದೆ. ಹಣ ಕಟ್ಟಿದ ರಸೀದಿಗಳಿವೆ. ಡಾ.ದೀಪಾ ಹನುಮಸಾಗರ ಇವರು ಜನರನ್ನು ದಾರಿ ತಪ್ಪಿಸಿ ಮೋಸ ಮಾಡುತ್ತಿದ್ದ ಬೇರೆಯವರು ವಂಚನೆಗೆ ಒಳಗಾಗಬಾರದು ಎಂದು ಮನವಿ ಮಾಡಿದರು. ಕೂಡಲೇ ಹಣ ಮರಳಿಸಬೇಕೆಂದು ಒತ್ತಾಯಿಸಿದರು.

## 42 ದಿನಗಳ ಸಾವು-ಬದುಕಿನ ಹೋರಾಟದಲ್ಲಿ ಗೆದ್ದ 13 ವರ್ಷದ ಬಾಲಕ

ಗಿಜಟಿರಣ ಖಿಡಿಠಟಭಠ ಉಂಟಾಗಿತ್ತು. ಈ ಎಲ್ಲ ಸಂದಿಗ್ಧ ಸನ್ನಿವೇಶಗಳನ್ನು ಆಸ್ಪತ್ರೆಯ ವೈದ್ಯರ ತಂಡವು ಸಮರ್ಥವಾಗಿ ಎದುರಿಸಿ ಇನ್ನಷ್ಟು ಜಾಗ್ರತೆ ಮತ್ತು ನಿರಂತರ ಆರೈಕೆಯನ್ನು ಮಾಡಿ ಕೊನೆಗೂ ಬಾಲಕ ಪ್ರಜ್ವಲ್ ಸಂಪೂರ್ಣ ಗುಣಮುಖರಾಗಿ ಜೀವನ್ಮರಣದ ಹೋರಾಟದಲ್ಲಿ ಜಯದ ನಗೆಯನ್ನು ಬೀರಿದ್ದಾರೆ.

ಕೆಲ ವಾರಗಳ ಹಿಂದೆ ವೆಂಟಿಲೇಟರ್ ಮೇಲೆ, ಜಗತ್ತಿಗೆ ಪ್ರತಿಕ್ರಿಯೇ ಇಲ್ಲದ ಸ್ಥಿತಿಯಲ್ಲಿದ್ದ ಬಾಲಕನು ಇಂದು ಸ್ವತಃ ನಡೆದುಕೊಂಡು ಹೋಗುವುದು, ಬಾಯಿಯಿಂದ ಆಹಾರ ಸೇವಿಸು ವುದು, ಕ್ಲಿನಿಕಲ್ ಹಾಗೂ ಲಕ್ಷಣಾತ್ಮಕವಾಗಿ ಉತ್ತಮ ಸ್ಥಿತಿಯಲ್ಲಿ ಮನೆಗೆ ಮರಳಿ ತನ್ನ ಕುಟುಂಬದೊಂದಿಗೆ ಹೊಸ ಜೀವನದತ್ತ ಹೆಜ್ಜೆ ಯನ್ನಿಟ್ಟಿದ್ದಾನೆ.

ಬಾಲಕನಿಗೆ ಹೊಸ ಬದುಕನ್ನು ದಯಪಾಲಿ ಸಿದ ಯಶಸ್ಸು ಒಬ್ಬರದ್ದಲ್ಲ ಅದು ಇಡೀ ಆಸ್ಪತ್ರೆ ಸಮೂಹ ಪ್ರಯತ್ನದ ಫಲವಾಗಿದೆ.ಈ ಯಶಸ್ಸಿನ ಹಿಂದೆ ನ್ಯೂರಾಲಜಿ ತಂಡದ ಡಾ. ರವಿ ಕುಮಾರ್, ಡಾ. ಜಮುನಾಶ್ರೀ, ಡಾ. ಮಂಜುನಾಥ್ ರಾವ್ ಮತ್ತು ಡಾ. ನಾಗಭೂಷಣ್,ಪೌಷ್ಟಿಕ ತಜ್ಞರಾದ ಡಾ. ಪ್ರೀತಿ, ಫಿಸಿಯೋಥೆರಪಿ ಮತ್ತು ಸಿಡಿಸಿ ತಂಡದ ಡಾ. ಬುಶ್ರಾ, ಆಸ್ಪತ್ರೆಯ ವೈದ್ಯಕೀಯ ತಂಡ, ಪಿಜಿ ರೆಸಿಡೆಂಟ್ಸ್, ಯುವ ವೈದ್ಯರು,ಐಸಿಯು ನರ್ಸಿಂಗ್ ಸಿಬ್ಬಂದಿಯ ಹಗಲು-ರಾತ್ರಿ ನಿರಂತರ ಸೇವೆಯು ಅಡಗಿದೆ.

ಅಷ್ಟೇ ಅಲ್ಲದೇ ಆಸ್ಪತ್ರೆ, ತಜ್ಞ ವೈದ್ಯರ ತಂಡ ಹಾಗೂ ಸಿಬ್ಬಂದಿ ಮೇಲೆ ಅಪಾರ ನಂಬಿಕೆ ಇಟ್ಟು ಪ್ರಜ್ವಲ್ನ ಚಿಕಿತ್ಸೆಯನ್ನು ನಮಗೆ ಒಪ್ಪಿಸಿದ ಡಾ. ಕೆ. ಶಿವರಾಜ್ ಅವರಿಗೆ ವಿಶೇಷ ಧನ್ಯವಾದಗಳು. ಕಾರಣ ಇಂತಹ ಶಿಫಾರಸ್ಸುಗಳು ಕೇವಲ ವೈದ್ಯಕೀಯ ನಿರ್ಧಾರಗಳಲ್ಲ ಅವು ನಂಬಿಕೆಯ ಪ್ರತೀಕಗಳು ಎಂಬುವುದನ್ನು ಮತ್ತೊಮ್ಮೆ ಸಾಬೀತುಗೊಳಿಸಿದೆ.

ಎಲ್ಲದಕ್ಕು ಮುಖ್ಯವಾಗಿ ಬಾಲಕ ಪ್ರಜ್ವಲ್ನ ಪೋಷಕರ ನಂಬಿಕೆ, ಅಶಾಭಾವನೆ ದೊಡ್ಡದಾಗಿದೆ. ಇಂದಿನ ಕಾಲದಲ್ಲಿ ಅನೇಕ ಕುಟುಂಬಗಳು ಬೇಗ ನಿರಾಶರಾಗುವಾಗ, ಪ್ರಜ್ವಲ್ ಕುಟುಂಬಸ್ಥರು ಮಾತ್ರ ಪ್ರತಿಯೊಂದು ಸಂಕಷ್ಟದಲ್ಲೂ ಅಚಲ ನಂಬಿಕೆಯಿಂದ ನಮ್ಮ ಜೊತೆ ನಿಂತಿದ್ದಾರೆ. ವೆಂಟಿಲೇಟರ್ ದಿನಗಳಿಂದ ಕೋಮಾ ರಾತ್ರಿಗಳವರೆಗೆ, ಹಲವಾರು ಚಿಕಿತ್ಸಾ ಪ್ರಕ್ರಿಯೇಗಳು ಮತ್ತು ಹಿನ್ನಡೆಗಳ ನಡುವೆಯೂ ಕಿಂಚಿತ್ತು ಕುಂದದ ಅವರ ವಿಶ್ವಾಸವು ವೈದ್ಯರಿಗೆ ದೊರೆತ ಅತ್ಯಂತ ದೊಡ್ಡ ಗೌರವವೇವಾಗಿದೆ.

ಔಷಧ ಚಿಕಿತ್ಸೆ ನೀಡುತ್ತದೆ.ಆದರೆ ತಂಡದ ಒಗ್ಗಟ್ಟು, ನಂಬಿಕೆ ಮತ್ತು ಅಚಲ ಹೋರಾಟವೇ ಅದ್ಭುತಗಳನ್ನು ಸೃಷ್ಟಿಸುತ್ತವೆ ಎಂಬುವುದಕ್ಕೆ ಪ್ರಜ್ವಲ್ ನ ಈ ಸಾಹಸ ಕಥೆಯು ಪ್ರೇರಣೆಯನ್ನು ನೀಡುತ್ತದೆ.

## ಡಿ.ಕೆ.ಶಿವಕುಮಾರ್ ಸೇರಿ ಹಲವು ರಾಜ್ಯಗಳ ಮುಖ್ಯಮಂತ್ರಿಗಳು ಭಾಗಿ

ಹೊಸದಾಗಿ ಆಯ್ಕೆಗೊಂಡ ಪಶ್ಚಿಮ ಬಂಗಾಳ ಸಿಎಂ ಸುವೇಂದು ಅಧಿಕಾರಿ, ತಮಿಳುನಾಡು ಸಿಎಂ ಸಿ ಜೋಸೆಫ್ ವಿಜಯ್, ಕರ್ನಾಟಕ ಸಿಎಂ ಡಿಕೆ ಶಿವಕುಮಾರ್ ಮತ್ತು ಕೇರಳ ಸಿಎಂ ವಿಡಿ ಸತೀಶನ್ ಸೇರಿದಂತೆ ಹಲವು ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ನಾಯಕರು ಸಭೆಯಲ್ಲಿ ಹಾಜರಿದ್ದಾರೆ.

ಈ ವರ್ಷ ನೀತಿ ಆಯೋಗದ ಸಭೆಯು ವಿಕಸಿತ ಭಾರತ 2047ಕ್ಕೆ ಸಮಗ್ರ ಮಾನವ ಅಭಿವೃದ್ಧಿ ಧ್ಯೇಯದ ಮೇಲೆ ನಡೆದಿದೆ. ಇದು ವಯಸ್ಸು, ಪ್ರದೇಶ, ಲಿಂಗ ಅಥವಾ ಸಾಮಾಜಿಕ ಆರ್ಥಿಕ ಹಿನ್ನೆಲೆಯನ್ನು ಲೆಕ್ಕಿಸದೆ ಎಲ್ಲಾ ನಾಗರಿಕರ ಯೋಗಕ್ಷೇಮ ಮತ್ತು ಅಭಿವೃದ್ಧಿಗೆ ಒತ್ತು ನೀಡುತ್ತದೆ.

ಇದರ ಜೊತೆಗೆ ಪ್ರಧಾನಿ ನರೇಂದ್ರ ಮೋದಿ, ದೇಶಾದ್ಯಂತ ಉದ್ಯಮಶೀಲತೆ, ಕೌಶಲ್ಯಾಭಿವೃದ್ಧಿ ಮತ್ತು ಸುಸ್ಥಿರ ಉದ್ಯೋಗಾ ವಕಾಶ ಸೃಷ್ಟಿಗೆ ಉತ್ತೇಜಿಸಿ ಚರ್ಚೆ ನಡೆಸಲಿದ್ದಾರೆ.

ಸಮಗ್ರ ಮಾನವ ಅಭಿವೃದ್ಧಿ ಚೌಕಟ್ಟು ನಾಲ್ಕು ಪ್ರಮುಖ ಸ್ತಂಭಗಳ ಮೇಲೆ ಆಧರಿತವಾಗಿದೆ. ಅವು ಮೂಲಭೂತ ಮಾನವ ಬಂಡವಾಳ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ಕೌಶಲ್ಯಗಳು, ಉತ್ಪಾದಕ ಉದ್ಯೋಗ, ಉದ್ಯಮಶೀಲತೆ ಮತ್ತು ವಿಕೇಂದ್ರೀಕೃತ ಬೆಳವಣಿಗೆ, ಆರೋಗ್ಯ, ಪೋಷಣೆ ಮತ್ತು ಯೋಗಕ್ಷೇಮ ಮತ್ತು ಎಲ್ಲರಿಗೂ ಸಮಾನತೆ ಮತ್ತು ಘನತೆ ಎಂಬುದಾಗಿದೆ.

ಇದರ ಜೊತೆಗೆ ಆಡಳಿತ, ಡಿಜಿಟಲ್ ಸಾರ್ವಜನಿಕ ಸೌಕರ್ಯ, ಪಾಲುದಾರಿಕೆಗಳು ಮತ್ತು ಡೇಟಾ ಚಾಲಿತ ವ್ಯವಸ್ಥೆಗಳು, ಅಲ್ಪ, ಮಧ್ಯಮ ಮತ್ತು ದೀರ್ಘಾವಧಿಯ ಫಲಿತಾಂಶ, ಸಮಾನ ಮತ್ತು ಸುಸ್ಥಿರ ಬೆಳವಣಿಗೆಯ ಕಡೆಗೆ ಏಕೀಕೃತ ಮತ್ತು ಸಹಯೋಗದ ವಿಧಾನವನ್ನು ಬಲಪಡಿಸುವ ಕುರಿತು ಚರ್ಚಿಸಲಾಗುವುದು.

ಜೊತೆಗೆ ನೀತಿ ಆಯೋಗದ ಆಡಳಿತ ಮಂಡಳಿಯು 2025ರ ಡಿಸೆಂಬರ್ 26 ರಿಂದ 28 ರವರೆಗೆ ನಡೆದ 5ನೇ ರಾಷ್ಟ್ರೀಯ ಮುಖ್ಯ ಕಾರ್ಯದರ್ಶಿಗಳ ಸಮ್ಮೇಳನದ ಶಿಫಾರಸುಗಳ ಮೇಲೂ ಗಮನ ಹರಿಸುತ್ತದೆ ಎಂದು ತಿಳಿಸಲಾಗಿದೆ.

## ನನ್ನ ಮತ್ತು ಸಿದ್ದರಾಮಯ್ಯ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ, ಅಹಿಂದ ಸಂಘಟನೆ ನಾನೇ ಮುನ್ನಡೆಸುತ್ತೇನೆ-ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಬೆಂಗಳೂರು,ಜೂ.11**-ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಬೆನ್ನಲ್ಲೇ ಕೇಳಿ ಬರುತ್ತಿರುವ ವದಂತಿಗಳಿಗೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ತೆರೆ ಎಳೆದಿದ್ದಾರೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ನನ್ನ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದು ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡುವಾಗ ಅವರು ಸ್ಪಷ್ಟಪಡಿಸಿದ್ದಾರೆ.



ಐಟಿ ಸೆಲ್‌ಗಳ ಅಪಪ್ರಚಾರ:ತಮ್ಮ ಮತ್ತು ಸಿದ್ದರಾಮಯ್ಯ ಅವರ ನಡುವಿನ ಸಂಬಂಧದ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸುದ್ದಿಗಳ ಬಗ್ಗೆ ಪ್ರತಿಕ್ರಿಯಿಸಿದ ಸಚಿವರು, ನಮ್ಮ ನಡುವೆ ಗೊಂದಲ ಸೃಷ್ಟಿಸಲು ಕೆಲವು ಐಟಿ ಸೆಲ್‌ಗಳವರು ಇಲ್ಲದ ಅಪಪ್ರಚಾರ ಮಾಡುತ್ತಿದ್ದಾರೆ. ನಮಗೆ ಪರಿಚಯವಿರುವ ಐಟಿ ಸೆಲ್‌ಗಳೇ ಈ ವಿಚಾರದಲ್ಲಿ ಹೆಚ್ಚಿನ ಪ್ರಚಾರ ನೀಡಿವೆ. ಆದರೆ, ಮೊದಲಿನಿಂದಲೂ ನಾನು ಹೇಳುತ್ತಿರುವಂತೆ ನಮ್ಮ ನಡುವೆ ಅತ್ಯುತ್ತಮ ಬಾಂಧವ್ಯವಿದ್ದು, ಯಾವುದೇ ಭಿನ್ನಾಭಿಪ್ರಾಯಗಳಿಲ್ಲ. ಈ ಕುರಿತಾದ ಚರ್ಚೆಗಳು ಸಂಪೂರ್ಣ ಅನಾವಶ್ಯಕ ಎಂದಿದ್ದಾರೆ.

ಅಹಿಂದ ಸಂಘಟನೆ ಮುಂದುವರಿಕೆ:ರಾಜ್ಯದಲ್ಲಿ 'ಅಹಿಂದ' (ಅಲ್ಪಸಂಖ್ಯಾತ, ಹಿಂದುಳಿದ ಮತ್ತು ದಲಿತ ವರ್ಗಗಳು) ನಾಯಕತ್ವದ ಕುರಿತಾದ ಪ್ರಶ್ನೆಗೆ ಉತ್ತರಿಸಿದ ಜಾರಕಿಹೊಳಿ, ಅಹಿಂದ ಸಂಘಟನೆ ಸದಾ ಇದ್ದೇ ಇರುತ್ತದೆ. ಸಿದ್ದರಾಮಯ್ಯ ಅವರ ಮಾರ್ಗದರ್ಶನದಲ್ಲೇ ಈ ಸಂಘಟನೆಯನ್ನು ಹಾಗೂ ಅದರ ಧ್ವಜವನ್ನು ನಾನೇ ಮುಂದೆ ಕೊಂಡೊಯ್ಯಲಿದ್ದೇನೆ ಎಂದು ದೃಢವಾಗಿ ಹೇಳಿದ್ದಾರೆ. ಅಹಿಂದ ವರ್ಗದಲ್ಲಿ ನೂರಾರು ಜಾತಿಗಳಿದ್ದು, ಅವರ ಹಕ್ಕುಗಳಿಗಾಗಿ ಹೊಸ ನಾಯಕತ್ವದ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಸ್ಥಾನಮಾನಕ್ಕೆ ಸದ್ಯ ಆತುರವಿಲ್ಲ:ಕೆಪಿಸಿಸಿ ಅಧ್ಯಕ್ಷ ಸ್ಥಾನ ಅಥವಾ ಇತರ ಪ್ರಮುಖ ಜವಾಬ್ದಾರಿಗಳ ಕುರಿತು ಮಾತನಾಡಿದ ಸಚಿವರು, ಸದ್ಯ ನನಗೆ ಸಿಕ್ಕಿರುವ ಸ್ಥಾನಕ್ಕೆ ನಾನು ತೃಪ್ತನಾಗಿದ್ದೇನೆ. ಕಾಂಗ್ರೆಸ್ ಪಕ್ಷದಲ್ಲಿ ತಾಳ್ಮೆಯಿಂದ ಕಾಯುವುದು ಬಹಳ ಮುಖ್ಯ. ಕಾಯ್ದವರಿಗೆ ಸೂಕ್ತ ಸಮಯದಲ್ಲಿ ಎಲ್ಲವೂ ಸಿಗುತ್ತದೆ. ನಾನು ಕೂಡ ಮುಂದಿನ ದಿನಗಳವರೆಗೆ ತಾಳ್ಮೆಯಿಂದ ಕಾಯಲು ಸಿದ್ಧನಿದ್ದೇನೆ ಎಂದು ತಿಳಿಸಿದ್ದಾರೆ.

## ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಹರಪನಹಳ್ಳಿ,ಜೂ.11**-ತಾಲೂಕಿನ ವಿವಿಧೆಡೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕಿ ಎಂ.ಪಿ ಲತಾ ಮಲ್ಲಿಕಾರ್ಜುನ್ ಬುಧವಾರ ಚಾಲನೆ ನೀಡಿದರು.



ತಾಲೂಕಿನ ಉದಯಪುರ, ಉದ್ದಗಟ್ಟಿ ಸಣ್ಣತಾಂಡ ಹಾಗೂ ಉದ್ದಗಟ್ಟಿ ಗ್ರಾಮಗಳ ಎಸ್ಸಿ ಕಾಲೋನಿಗಳಲ್ಲಿ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ಬಳಿಕ ಶಾಂತಿನಗರ, ವಿ.ಕೊರಚರಹಟ್ಟಿ, ಅರೆಮಜ್ಜಿಗೇರಿ ಹಾಗೂ ಕಂಚಿಕೇರಿ ಗ್ರಾಮಗಳ ಎಸ್ಸಿ ಕಾಲೋನಿಗಳಲ್ಲಿ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಹಾಗೂ ಕುಂಚೂರು ಗ್ರಾಮದಿಂದ ಅರಸನಾಳು ಗ್ರಾಮಕ್ಕೆ ಸೇರುವ ರಸ್ತೆ ಕಾಮಗಾರಿಗೆ ಚಾಲನೆ ನೀಡಿದರು. ನಂತರ ಬೈರಾಪುರ ಗ್ರಾಮದ ಎಸ್ಸ್ ಕಾಲೋನಿಗಳಲ್ಲಿ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಎಇಇ ಕುಬೇಂದ್ರನಾಯ್ಕ್, ಇಂಜಿನಿಯರ್ ಸುಭಾಷ್ ನಾಯ್ಕ್, ಶಾಸಕರ ಆಪ್ತ ಸಹಾಯಕ ಮತ್ತೂರು ಬಸವರಾಜ, ಮಜ್ಜಿಗೇರಿ ವಿ.ದುರುಗಪ್ಪ,

ಕರಿಯಲ್ಲಪ್ಪ, ಚೌಡಪ್ಪ, ರವಿಕುಮಾರ, ಅರಸನಾಳು ಗಿರಿರಾಜರೆಡ್ಡಿ, ಲಕ್ಕಪ್ಪ, ಮಾರುತಿ, ಪರಸಪ್ಪ, ಬೈರಾಪುರ ಚಿದಾನಂದ, ತೆಲಗಿ ಸಂಕ್ರಪ್ಪ ಪ್ರಕಾಶ, ಉದ್ಘಟ್ಟಿ ಲಕ್ಷ್ಮಣನಾಯ್ಕ್, ಪ್ರಕಾಶನಾಯ್ಕ್, ಕುಂಚೂರು ಶೌಕತ್ ಸೇರಿದಂತೆ ಇತರರು ಇದ್ದರು.

## ರೌಡಿಗಳೊಂದಿಗೆ ಸೆಲ್ಫಿ ತೆಗೆದುಕೊಳ್ಳುವುದು ಕಂಡುಬಂದರೆ ಶಿಸ್ತು ಕ್ರಮ: ಪೊಲೀಸರಿಗೆ ಎಚ್ಚರಿಕೆ ನೀಡಿದ ಗೃಹ ಸಚಿವರು

**ಬೆಂಗಳೂರು,ಜೂ.11**-ರೌಡಿ ಹಾಗೂ ಕ್ರಿಮಿನಲ್ ಹಿನ್ನೆಲೆ ಇರುವವರ ಜೊತೆ ನಿಕಟ ಸಂಪರ್ಕ ಹಾಗೂ ಸೆಲ್ಫಿ ತೆಗೆದುಕೊಳ್ಳುವುದು ಕಂಡುಬಂದರೆ ಅಂತಹ ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಎಚ್ಚರಿಕೆ ನೀಡಿದ್ದಾರೆ.



ಗೃಹ ಸಚಿವರಾದ ಬಳಿಕ ಮೊದಲ ಬಾರಿಗೆ ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರ್. ಸೈಬರ್, ಡ್ರಗ್, ಸಂಚಾರ ದಟ್ಟಣೆ ಬಗ್ಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ಸಚಿವರಿಗೆ ಅಧಿಕಾರಿಗಳು ಮಾಹಿತಿ ನೀಡಿದರು.

ಸಭೆ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಪ್ರಿಯಾಂಕ್ ಖರ್ಗೆ, ಪ್ರತಿಯೊಂದು ಪೊಲೀಸ್ ಠಾಣೆಗಳಲ್ಲಿ ರೌಡಿ ನಿಗ್ರಹ ದಳ ರಚಿಸಲು ಈಗಾಗಲೇ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಕೆಳಹಂತದ ಪೊಲೀಸ್ ಅಧಿಕಾರಿಗಳು ರೌಡಿಗಳ ಜನ್ಮದಿನದ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು, ಊಟಕ್ಕೆ ಹೋಗುವುದು ಅಥವಾ ಅವರೊಂದಿಗೆ ಸೆಲ್ಫಿ ತೆಗೆದುಕೊಳ್ಳುವಂತಹ ಕೃತ್ಯಗಳಲ್ಲಿ ತೊಡಗಬಾರದು ಎಂದು ಸ್ಪಷ್ಟ ನಿರ್ದೇಶನ ನೀಡಲಾಗಿದೆ. ಇಂತಹ ಲೋಪಗಳು ಕಂಡುಬಂದಲ್ಲಿ ಕಠಿಣ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದರು.ಬೆಂಗಳೂರು ಮೊಬಿಲಿಟಿ ಮಿಷನ್ (ಸಂಚಾರ ದಟ್ಟಣೆ ನಿಯಂತ್ರಣ): ಬೆಂಗಳೂರು ನಗರದ ಪ್ರಮುಖ ಸಮಸ್ಯೆಯಾದ ಟ್ರಾಫಿಕ್ ದಟ್ಟಣೆಯನ್ನು ಕೇವಲ ಮೂಲ ಸೌಕರ್ಯ ಬದಲಾವಣೆಯಿಲ್ಲದೇ, ವ್ಯವಸ್ಥಿತ ಲೋಪದೋಷಗಳನ್ನು ಸರಿಪಡಿಸುವ ಮೂಲಕ ನಿರ್ವಹಿಸಲು ನಿರ್ಧರಿಸಲಾಗಿದೆ. ಇದಕ್ಕಾಗಿ ಬಿಎಂಟಿಸಿ, ಬಿಎಂಆರ್‌ಸಿಎಲ್ ಮತ್ತು ಖಾಸಗಿ ಸಹಭಾಗಿತ್ವದೊಂದಿಗೆ ಬೆಂಗಳೂರು ಅರ್ಬನ್ ಮೊಬಿಲಿಟಿ ಮಿಷನ್' ತಂಡವನ್ನು ರಚಿಸಲಾಗುವುದು. ಇದರ ಸಂಪೂರ್ಣ ನೀಲಿ ನಕ್ಷೆಯನ್ನು ಮುಂದಿನ 2-3 ದಿನಗಳಲ್ಲಿ ಪ್ರಕಟಿಸಲಾಗುವುದು ಎಂದು ತಿಳಿಸಿದರು.

ಸೈಬರ್ ಅಪರಾಧಗಳ ತಡೆಗೆ ಖಾಸಗಿ ಸಹಭಾಗಿತ್ವ: ಬೆಂಗಳೂರು ಜಾಗತಿಕ ಮಟ್ಟದಲ್ಲಿ 4ನೇ ಅತಿ ದೊಡ್ಡ ತಂತ್ರಜ್ಞಾನ ಕ್ಲಸ್ಟರ್ ಆಗಿರುವುದರಿಂದ ಇಲ್ಲಿ ಸೈಬರ್ ಅಪರಾಧಗಳು ಹೆಚ್ಚುತ್ತಿವೆ. ಸೈಬರ್ ಅಪರಾಧಿಗಳನ್ನು ಮಟ್ಟಹಾಕಲು ಗೃಹ ಇಲಾಖೆ, ಐಟಿ - ಬಿಟಿ ಮತ್ತು ಇ - ಆಡಳಿತ ಇಲಾಖೆಗಳನ್ನು ಒಗ್ಗೂಡಿಸಿ ಸಮಗ್ರ ನೀತಿಯನ್ನು ತರಲಾಗುವುದು. ಮುಂದಿನ ವಾರ ಖಾಸಗಿ ತಂತ್ರಜ್ಞಾನ ಸಂಸ್ಥೆಗಳೊಂದಿಗೆ ಸಭೆ ನಡೆಸಿ, ಅತ್ಯಾಧುನಿಕ ತಂತ್ರಜ್ಞಾನ ಹಾಗೂ ಸೇಫ್ಟಿ ಗಾರ್ಡ್ ರೈಲ್ಸ್' ಅಳವಡಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು ಎಂದರು.ಮಾದಕ ದ್ರವ್ಯ ಜಾಲದ ವಿರುದ್ಧ ಗೃಹ ಇಲಾಖೆ ಸಮರ ಸಾರಿದೆ. ನೆರೆ ರಾಜ್ಯಗಳಾದ ಕೇರಳ, ಮಹಾರಾಷ್ಟ್ರ ಮತ್ತು ಆಂಧ್ರಪ್ರದೇಶಗಳಿಂದ ಸಣ್ಣ ಪ್ರಮಾಣದಲ್ಲಿ ಬರುವ ಮಾತ್ರೆಗಳು ಹಾಗೂ ಸೈಕೋಟ್ರೋಪಿಕ್ ಪದಾರ್ಥಗಳನ್ನು ಪತ್ತೆಹಚ್ಚಲು ಗಡಿಭಾಗಗಳಲ್ಲಿ ಹೆಚ್ಚಿನ ಟೆಸ್ಟಿಂಗ್ ಕಿಟ್‌ಗಳನ್ನು ಒದಗಿಸಲಾಗುವುದು. ವಿದೇಶಿ ಪ್ರಜೆಗಳ ಕಾನೂನುಬಾಹಿರ ವಾಸ್ತವ್ಯ ಹಾಗೂ ಗಡಿಪಾರು ಪ್ರಕ್ರಿಯೆಯನ್ನು ವೇಗಗೊಳಿಸಲು ಕೇಂದ್ರ ಸರ್ಕಾರದ ವಿದೇಶಾಂಗ ಸಚಿವಾಲಯದೊಂದಿಗೆ ಚರ್ಚಿಸಲಾಗುವುದು.

## ಬೆಳಗಾವಿ: 2 ಕೋಟಿ ಇನ್ಸೂರೆನ್ಸ್ ಹಣಕ್ಕಾಗಿ ಗಂಡನನ್ನೇ ಕೊಲೆಗೈದ ಪತ್ನಿ

ನಂತರ ಪ್ರಕರಣ ದಾಖಲಿಸಿಕೊಂಡ ಯಮಕನಮರಡಿ ಹಾಗೂ ಘಟಪ್ರಭಾ ಪೊಲೀಸರು ಈ ಕೊಲೆ ಪ್ರಕರಣವನ್ನು ಚಾಣಾಕ್ಷತನದಿಂದ ತನಿಖೆ ಮಾಡಿ ಮಾಜಿ ಸೈನಿಕನ ಸಾವಿನ್ ಹಿಂದೆ ತನಿಖೆ ನಡೆಸಿದಾಗ ಇದು ಅಪಘಾತದಿಂದ ಮೃತಪಟ್ಟಿರುವುದು ಅಲ್ಲ. ಈ ವ್ಯಕ್ತಿಯನ್ನು ಕೊಲೆ ಮಾಡಲಾಗಿದೆ ಎಂದು ಬಹಿರಂಗಗೊಂಡಿದೆ. ಸದ್ಯ ಖಿಲಾಡಿ ಪತ್ನಿ ಹಾಗೂ ಆಕೆಯ ಪ್ರೀಯಕರನ್ನು ಯಮಕನಮರಡಿ ಪೊಲೀಸರು ವಶಕ್ಕೆ ಪಡೆದಿದ್ದು, ಇನ್ನಷ್ಟು ಮಾಹಿತಿ ತನಿಖೆಯ ಬಳಿಕ ತಿಳಿದು ಬರಲಿದೆ.

## ಮೂವರು ಭಾರತೀಯ ನಾವಿಕರ ಸಾವು: ದೃಢಪಡಿಸಿದ ಕೇಂದ್ರ ಸಚಿವ

ಅವರು ಮಾಹಿತಿ ನೀಡಿದ್ದಾರೆ. ಪಲಾವ್ ಧ್ವಜ ಹೊತ್ತ ಎಂಟಿ ಸೆಟ್‌ಬೆಲ್ಲೊ ಹಡಗಿನಲ್ಲಿ ನಡೆದ ದುರಂತದ ಬಗ್ಗೆ ತಿಳಿದು ಆಘಾತವಾಗಿದೆ. ಈ ಘಟನೆ ದುರದೃಷ್ಟಕರ, ಕಾಣೆಯಾಗಿರುವ ಮೂವರು ಭಾರತೀಯ ನಾವಿಕರ ಶವಗಳನ್ನು ಪತ್ತೆಹಚ್ಚಿ ಗುರುತಿಸಿದ ಬಳಿಕ ಅವರು ಮೃತಪಟ್ಟಿದ್ದಾರೆ ಎಂಬುದನ್ನು ದೃಢಪಡಿಸಲಾಗಿದೆ ಎಂದು ಸೋನೋವಾಲ್ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಹಾರ್ಮುಜ್ ಜಲಸಂಧಿ ಬಳಿ ವಾಣಿಜ್ಯ ಹಡಗಿನ ಮೇಲೆ ಅಮೆರಿಕ ನಡೆಸಿದ ದಾಳಿಯಲ್ಲಿ ಮೂವರು ಭಾರತೀಯ ನಾವಿಕರು ಸಾವನ್ನಪ್ಪಿದ್ದಾರೆ ಫಾರ್ವರ್ಡ್ ಸೀಮೆನ್ಸ್ ಯೂನಿಯನ್ ಆಫ್ ಇಂಡಿಯಾ (ಊಖಖಿಐ) ಖಚಿತಪಡಿಸಿತ್ತು. ಹಡಗಿನೊಂದಿಗಿನ ಸಂಪರ್ಕ ಸಂಪೂರ್ಣವಾಗಿ ಕಡಿತಗೊಂಡಿದೆ. ಮಾಹಿತಿಗಳನ್ನು ಇನ್ನು ಕೂಡ ಪರಿಶೀಲಿಸಲಾಗುತ್ತಿದೆ ಎಂದು ಊಖಖಿಐ ಪ್ರಧಾನ ಕಾರ್ಯದರ್ಶಿ ಮನೋಜ್ ಯಾದವ್ ತಿಳಿಸಿದ್ದರು.

ನಮಗೆ ಹಡಗಿನೊಂದಿಗೆ ಸಂಪರ್ಕ ಸಾಧಿಸಲು ಸಾಧ್ಯವಾಗುತ್ತಿಲ್ಲ. ಸದ್ಯ ಸಿಕ್ಕಿರುವ ಮಾಹಿತಿ ಪ್ರಕಾರ ಇಬ್ಬರು ಸಾವನ್ನಪ್ಪಿದ್ದಾರೆ. ಚೀಫ್ ಇಂಜಿನಿಯರ್ ಇನ್ನು ಕೂಡ ಕಾಣೆಯಾಗಿದ್ದಾರೆ. ಈ ಮೂವರು ನಾವಿಕರು ಹಿಮಾಚಲ ಪ್ರದೇಶ, ಉತ್ತರ ಪ್ರದೇಶ ಮತ್ತು ಆಂಧ್ರಪ್ರದೇಶ ರಾಜ್ಯಗಳಿಗೆ ಸೇರಿದವರಾಗಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದರು. ಆದರೆ ಈಗ ಮೂವರು ನಾವಿಕರು ಮೃತಪಟ್ಟಿದ್ದಾರೆ ಎಂಬು ಖಚಿತವಾಗಿದೆ. ಇದನ್ನು ಕೇಂದ್ರ ಸಚಿವರೇ ದೃಢಪಡಿಸಿದ್ದಾರೆ.

ಗೊತ್ತಿದ್ದೂ ಅಮೆರಿಕದಿಂದ ದಾಳಿ: ಹಡಗಿನಲ್ಲಿ ಭಾರತೀಯರು ಸೇರಿದಂತೆ ಇತರ ನಾವಿಕರು ಇದ್ದಾರೆ ಎಂಬುದು ಅಮೆರಿಕದ ನೌಕಾಪಡೆಗೆ ಮೊದಲೇ ಮಾಹಿತಿ ಇತ್ತು ಎಂದು ಊಖಖಿಐ ಪ್ರಧಾನ ಕಾರ್ಯದರ್ಶಿ ಮನೋಜ್ ಯಾದವ್ ಆರೋಪಿಸಿದ್ದಾರೆ. ಹಡಗಿನಲ್ಲಿದ್ದ ಜನರ ರಾಷ್ಟ್ರೀಯತೆಯ ಬಗ್ಗೆ ಅಮೆರಿಕಕ್ಕೆ ಮಾಹಿತಿ ಇರಲಿಲ್ಲ ಎಂಬುದನ್ನು ನಾನು ನಂಬುವುದಿಲ್ಲ. ಹಡಗಿನಲ್ಲಿ ಎಷ್ಟು ಜನ ಭಾರತೀಯರು ಮತ್ತು ವಿದೇಶಿಯರು ಇದ್ದರು ಎಂಬುದು ಅಮೆರಿಕದ ನೌಕಾಪಡೆಗೆ 101% ಖಚಿತವಾಗಿ ಗೊತ್ತಿತ್ತು. ಹಡಗು ಅವರ ಸೂಚನೆಗಳನ್ನು ಪಾಲಿಸದಿದ್ದರೆ, ಅವರ ಮೇಲೆ ದಾಳಿ ಮಾಡುವ ಬದಲು ವಶಕ್ಕೆ ಪಡೆಯುವ ಕೆಲಸ ಮಾಡಬೇಕಿತ್ತು ಎಂದು ಆಕ್ರೋಶ ಹೊರಹಾಕಿದ್ದಾರೆ. ದಾಳಿ ಖಂಡಿಸಿದ ಭಾರತ, ಅಮೆರಿಕಕ್ಕೆ ಸಮನ್ಸ್: ಇದಕ್ಕೂ ಮುನ್ನ, ಒಮಾನ್ ಕರಾವಳಿಯ ಬಳಿ ನಿಂತಿದ್ದ ವಾಣಿಜ್ಯ ಹಡಗಿನ ಮೇಲೆ ನಡೆದ ದಾಳಿಯನ್ನು ಭಾರತದ ವಿದೇಶಾಂಗ ಸಚಿವಾಲಯ ತೀವ್ರವಾಗಿ ಖಂಡಿಸಿದೆ. ಹಡಗಿನಲ್ಲಿದ್ದ 24 ಭಾರತೀಯ ಸಿಬ್ಬಂದಿ ಪೈಕಿ 21 ಜನರನ್ನು ರಕ್ಷಿಸಲಾಗಿದೆ. ಮೂವರು ಭಾರತೀಯರು ನಾಪತ್ತೆಯಾಗಿದ್ದಾರೆ ಎಂದು ಸಚಿವಾಲಯ ತಿಳಿಸಿತ್ತು.ಶಾಂತಿ ಕಾಪಾಡಲು ಭಾರತ ಕರೆ: ಈ ಪ್ರದೇಶದಲ್ಲಿ ಹಡಗುಗಳ ಮೇಲೆ ನಿರಂತರವಾಗಿ ನಡೆಯುತ್ತಿರುವ ದಾಳಿಗಳು ಆತಂಕಕಾರಿಯಾಗಿವೆ. ಇದು ಪ್ರಸ್ತುತ ನಡೆಯುತ್ತಿರುವ ಸಂಘರ್ಷದ ನೇರ ಪರಿಣಾಮವಾಗಿದೆ ಎಂದು ವಿದೇಶಾಂಗ ಸಚಿವಾಲಯ ಕಳವಳ ವ್ಯಕ್ತಪಡಿಸಿದೆ. ಉದ್ವಿಗ್ನತೆಯನ್ನು ತಕ್ಷಣವೇ ಕಡಿಮೆ ಮಾಡಬೇಕು. ರಾಜತಾಂತ್ರಿಕ ಮಾತುಕತೆಗಳ ಮೂಲಕ ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಮರುಸ್ಥಾಪಿಸಬೇಕು ಎಂದು ಭಾರತ ಮತ್ತೊಮ್ಮೆ ಮನವಿ ಮಾಡಿದೆ.

## ದ್ವಿತೀಯ ಪಿಯುಸಿನಲ್ಲಿ ರಾಜ್ಯಕ್ಕೆ 4ನೇ ರ್ಯಾಂಕ್ ಗಳಿಸಿದ್ದ ಅಭಿಜ್ಞಾ ಭಟ್ ಅನಾರೋಗ್ಯದಿಂದ ಸಾವು

ರವಿಶಂಕರ್ ಅವರ ಹಿರಿಯ ಪುತ್ರಿ. ಕೆಲ ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅಭಿಜ್ಞಾ ಭಟ್ ಚಿಕಿತ್ಸೆ ಪಡೆಯುತ್ತಿದ್ದರು. ಆರೋಗ್ಯದಲ್ಲಿ ಏರುಪೇರು ಕಂಡುಬಂದ ಹಿನ್ನೆಲೆಯಲ್ಲಿ ಅವರನ್ನು ಸುಳ್ಯದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಆದರೆ ಚಿಕಿತ್ಸೆ ಫಲಕಾರಿಯಾಗದೆ ಜೂನ್ 10ರಂದು ಕೊನೆಯುಸಿರೆಳೆದಿದ್ದಾರೆ ಎಂದು ಕುಟುಂಬ ಮೂಲಗಳು ತಿಳಿಸಿವೆ. ಇತ್ತೀಚೆಗೆ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದ ಅವರು 600 ಅಂಕಗಳಲ್ಲಿ 596 ಅಂಕಗಳನ್ನು ಪಡೆದು ರಾಜ್ಯದಲ್ಲಿ 4ನೇ ಸ್ಥಾನ ಗಳಿಸಿದ್ದರು. ಅವರ ಈ ಸಾಧನೆಗೆ ಸ್ಥಳೀಯರು, ಶಿಕ್ಷಕರಿಗೆಂದ ವ್ಯಾಪಕ ಪ್ರಶಂಸೆ ವ್ಯಕ್ತವಾಗಿತ್ತು.

ಓದಿನಲ್ಲಿ ಸದಾ ಮುಂದಿದ್ದ ಅಭಿಜ್ಞಾ, ತಮ್ಮ ಶ್ರಮ, ಪ್ರತಿಭೆ ಹಾಗೂ ಶಿಸ್ತಿನ ಮೂಲಕ ಶಿಕ್ಷಕರ ಮತ್ತು ಸಹಪಾಠಿಗಳ ಮೆಚ್ಚುಗೆಗೆ ಪಾತ್ರರಾಗಿದ್ದರು.

ಅವರ ಸಾಧನೆಯಿಂದ ಕುಟುಂಬಸ್ಥರು ಮಾತ್ರವಲ್ಲದೆ ಸುಳ್ಯ ತಾಲೂಕಿನ ಜನರು ಕೂಡ ಹೆಮ್ಮೆಪಟ್ಟಿದ್ದರು.

ಇತ್ತೀಚೆಗಷ್ಟೇ ರಾಜ್ಯ ಮಟ್ಟದ ರ್ಯಾಂಕ್ ಮೂಲಕ ಸಾಧನೆ ಮಾಡಿದ್ದ ಪ್ರತಿಭಾನ್ವಿತ ವಿದ್ಯಾರ್ಥಿನಿ ಇಷ್ಟು ಬೇಗ ಅಗಲಿರುವುದು ಅತ್ಯಂತ ನೋವಿನ ಸಂಗತಿ ಎಂದು ಸುಳ್ಯ ಭಾಗದ ಜನರು ಸಂತಾಪ ಸೂಚಿಸಿದ್ದಾರೆ.

ತಾಲೂಕಿಗೆ ಫಸ್ಟ್, ರಾಜ್ಯಕ್ಕೆ 4ನೇ ರ್ಯಾಂಕ್: ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದ ಅಭಿಜ್ಞಾ ಭಟ್ ಎಸ್ ಸುಳ್ಯ ತಾಲೂಕಿಗೆ ಪ್ರಥಮ, ರಾಜ್ಯಕ್ಕೆ 4ನೇ ರ್ಯಾಂಕ್: ಪಡೆದಿದ್ದರು. ಸುಳ್ಯದ ನೆಹರು

ಮೆಮೋರಿಯಲ್ ಪಿಯು ಕಾಲೇಜಿನ ವಿಜ್ಞಾನ ವಿಭಾಗ (ಪಿಸಿಎಂಬಿ )ವಿದ್ಯಾರ್ಥಿನಿಯಾಗಿದ್ದ ಅಭಿಜ್ಞಾ ಭಟ್ ಫಲಿತಾಂಶ ಪ್ರಕಟವಾದಾಗ 595 ಅಂಕ ಗಳಿಸಿದ್ದರು.

ಹಿಂದಿಯಲ್ಲಿ 98 ಅಂಕ ಗಳಿಸಿದ್ದರು. ಬಳಿಕ ಹಿಂದಿ ವಿಷಯದ ಮರು ಮೌಲ್ಯ ಮಾಪನದಲ್ಲಿ ಒಂದು ಅಂಕ ಲಭಿಸಿ 99 ಅಂಕಗಳೊಂದಿಗೆ ಒಟ್ಟು 596 ಅಂಕ ಗಳಿಸಿದ್ದರು. ಭೌತಶಾಸ್ತ್ರ, ಗಣಿತ, ರಸಾಯನಶಾಸ್ತ್ರ ಜೀವಶಾಸ್ತ್ರ ವಿಷಯದಲ್ಲಿ 100ಕ್ಕೆ 100 ಅಂಕ ಗಳಿಸಿದ್ದರು. ಹಾಗೆಯೇ ಜೆಇಇ ಮೈನ್ಸ್‌ನಲ್ಲಿ ಶೇ.94.29 ಗಳಿಸಿದ್ದರು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L